ಸಂಪುಟ : 9 ಸಂಚಿಕೆ 147 ಪುಟ : 4 ಬೆಲೆ: 3.00 ಮಂಗಳವಾರ ಜುಲೈ 16 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 147 Pages : 4 Price : 3.00 Tuesday July 16 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜಲಪಾತಗಳಿಗೆ ವಿಶೇಷ ಬಸ್

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಸಾರ್ವಜನಿಕರಿಗೆ ಪ್ರತಿ ಭಾನುವಾರದಂದು ಹಾಗೂ ರಜೆ ದಿನಗಳಂದು ಗೋಕಾಕ್ ಫಾಲ್ಸ್ ಹಾಗೂ ಜೋಗ ಫಾಲ್ಸ್‌ಗಳಿಗೆ ತೆರಳಲು ಜುಲೈ 21ರಿಂದ ಆಗಸ್ಟ್ 25ರವರೆಗೆ ವಾ.ಕ.ರ.ಸಾ ಸಂಸ್ಥೆ ಗದಗ ವಿಭಾಗದಿಂದ ವಿಶೇಷ ವಾಹನಗಳನ್ನು (ಪ್ಯಾಕೇಜ್ ಟೂರ್) ಕಾರ್ಯಾಚರಣೆಗೊಳಿಸಲಾಗುತ್ತಿದೆ. ಸದರಿ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಗದಗ ವಿಭಾಗದ ವಾ.ಕ.ರ.ಸಾ. ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಿಯರ್ ಕೌನ್ಸಿಲಿಂಗ್ ಪ್ರೋಗ್ರಾಮ್ ಫಾರ್ ಸಿ.ಎ. ವರ್ಕ್‌ಶಾಪ್




■ವಿಜಯಸಾಕ್ಷಿ ಸುದ್ದಿ, ಗದಗ

ಪದವಿಪೂರ್ವ ಶಿಕ್ಷಣವನ್ನು ಕಲಿಯುತ್ತಿರುವ ಇಂದಿನ ವಿದ್ಯಾರ್ಥಿ ಪರಿಶ್ರಮ ಪಟ್ಟು ಮುಂದೆ ಚಾರ್ಟರ್ಡ್ ಅಕೌಂಟಂಟ್ ಆದರೆ, ಆತನ ಸಹಿಯು ದೇಶದ ಪ್ರಧಾನ ಮಂತ್ರಿಯವರ ಸಹಿಗಿಂತಲೂ ಮಿಗಿಲು ಎಂದು ಸ್ವತಃ ನರೇಂದ್ರ ಮೋದಿಯವರೇ ಒಂದು ಸಿ.ಎ. ಸಮಾರಂಭದಲ್ಲಿ ತಿಳಿಸಿದ್ದಾರೆಂದು ಇನ್‌ಸ್ಟಿಟ್ಯೂಟ್ ಆಫ್ ಚಾರ್ಟರ್ಡ್ ಅಕೌಂಟಂಟ್ಸ್ ಆಫ್ ಇಂಡಿಯಾ, ಹುಬ್ಬಳ್ಳಿ ಶಾಖೆಯ ಸಂಪನ್ಮೂಲ ವ್ಯಕ್ತಿ ಸಿ.ಎ. ಶಿವಾನಂದ ಮಾಳಗಾವಿ ತಿಳಿಸಿದರು.

ಅವರು ಗದುಗಿನ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಜರುಗಿದ 'ಕರಿಯರ್ ಕೌನ್ಸಿಲಿಂಗ್ ಪ್ರೋಗ್ರಾಮ್ ಫಾರ್ ಸಿ.ಎ. ವರ್ಕ್‌ಶಾಪ್' ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ವರ್ಕ್‌ಶಾಪ್ ನಂತರ ಮಹಾವಿದ್ಯಾಲಯದ ವಿದ್ಯಾರ್ಥಿಗಳೊಂದಿಗೆ 'ಸಂವಾದ ಕಾರ್ಯಕ್ರಮ' ನಡೆಯಿತು. ವಿದ್ಯಾರ್ಥಿಗಳು ಕೇಳಿದ ಎಲ್ಲ ಪ್ರಶ್ನೆಗಳನ್ನು, ಸಮಸ್ಯೆಗಳನ್ನು ಶಾಂತತೆಯಿಂದ ಆಲಿಸಿ ಅವುಗಳಿಗೆ ಸಮರ್ಪಕ ಉತ್ತರ ನೀಡಿ ವಿದ್ಯಾರ್ಥಿಗಳ ಮನ ತಣಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿ, ಇಂದು ವಾಣಿಜ್ಯ ವಿಷಯಕ್ಕೆ ಹಿಂದೆಂದಿಗಿಂತಲೂ ಬೇಡಿಕೆ ಇದೆ. ವಾಣಿಜ್ಯ ವಿದ್ಯಾರ್ಥಿಗಳಾದ ತಾವು ಆಸಕ್ತಿವಹಿಸಿ, ಪರಿಶ್ರಮ ಪಟ್ಟು, ಸಮರ್ಪಕ ಕೋರ್ಸ್‌ಗಳಲ್ಲಿ ಭಾಗವಹಿಸಿ ನಿಮ್ಮ ವಿದ್ಯಾರ್ಥಿ ಜೀವನದಲ್ಲಿ ಯಶಸ್ಸು ಪಡೆಯಿರಿ ಎಂದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಚೇರ್‌ಮನ್ ಪ್ರೊ. ರಾಜೇಶ ಕುಲಕರ್ಣಿ, ನಿರ್ದೇಶಕರಾದ ಪ್ರೊ. ರೋಹಿತ ಕೆ.ಒಡೆಯರ್, ಪ್ರೊ. ರಾಹುಲ್ ಕೆ.ಒಡೆಯರ್, ಪ್ರೊ. ಉಡುಪಿ ದೇಶಪಾಂಡೆ, ಉಪ ಪ್ರಾಚಾರ್ಯ ಪ್ರೊ. ಸಯ್ಯದ ಮತೀನ ಮುಲ್ಲಾ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ಮಹಾವಿದ್ಯಾಲಯದ ಎಲ್ಲ ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಪ್ರೊ. ಡಿ.ಬಿ. ಕುಲಕರ್ಣಿ ಸ್ವಾಗತಿಸಿ ನಿರೂಪಿಸಿದರು. ಪ್ರೊ. ಸಂಗೀತಾ ಬೀಳಗಿ ಮುಖ್ಯ ಅತಿಥಿಗಳನ್ನು ಪರಿಚಯಿಸಿದರು. ಪ್ರೊ. ಎಸ್.ಎಸ್. ವಜ್ರಬಂಡಿ ವಂದಿಸಿದರು.

### ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದಿಂದ ಪತ್ರಿಕಾಗೋಷ್ಠಿ

## ಖಾಲಿ ಇರುವ ಹುದ್ದೆ ಭರ್ತಿ ಮಾಡಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಸುಮಾರು 2.50 ಲಕ್ಷ ಹೊರ ಗುತ್ತಿಗೆ ನೌಕರರ ಹುದ್ದೆಗಳು ಖಾಲಿ ಇವೆ. ಈಗ ಕೆಲಸ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರಿಗೆ ಇದು ಹೊರೆಯಾಗುತ್ತಿದೆ. ಸರ್ಕಾರ ಇದುವರೆಗೂ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ನಿರ್ಣಯ ಕೈಗೊಳ್ಳುತ್ತಿಲ್ಲ. ಸರ್ಕಾರದ ಈ ನಿರ್ಣಯದಿಂದಾಗಿ ಸದ್ಯ ದುಡಿಯುತ್ತಿರುವ ಹೊರಗುತ್ತಿಗೆ ನೌಕರರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಅಕ್ಷಯ್ ಡಿ.ಎಂ ಗೌಡ ಹೇಳಿದರು.




ನಗರದ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆರೋಗ್ಯ ಇಲಾಖೆಯಲ್ಲಿ ಹತ್ತಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದಲ್ಲಿ ಸುಮಾರು 9 ಸಾವಿರ ನೌಕರರು ಕಾರ್ಯನಿರ್ವಹಿಸುತ್ತಿದ್ದು, ಸರ್ಕಾರ ಒಂದು ಖಾಸಗಿ ಸಂಸ್ಥೆಗೆ ಟೆಂಡರ್ ನೀಡುವ ಮೂಲಕ ನೌಕರರನ್ನು ಶೋಷಿಸುತ್ತಿದೆ. ಗದಗ ಜಿಲ್ಲೆಯಲ್ಲಿ 142 ಹೊರಗುತ್ತಿಗೆ ನೌಕರರು ಆರೋಗ್ಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಣೆ ಮಾಡುತ್ತಿದ್ದು, ಅವರಿಗೆ ದೊರೆಯಬೇಕಾದ ಮೂಲಭೂತ ಸೌಲಭ್ಯಗಳು ಸಿಗುತ್ತಿಲ್ಲ. ಕೂಡಲೇ ಅವರಿಗೆ ಸೌಲಭ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದರು.

ಬಾಗಲಕೋಟೆ ಜಿಲ್ಲೆಯ ಹೊರಗುತ್ತಿಗೆ ನೌಕರರೊಬ್ಬರು ಇತ್ತೀಚೆಗೆ ಮೃತಪಟ್ಟಿದ್ದು, ಅವರ ಅಗಲಿಕೆಯಿಂದ ಅವರ ಮನೆಯ ಜೀವನ ತೆ-ಊಂದರೆ ಅನುಭವಿಸುವಂತಾಗಿದೆ. ಮೃತನ ಕುಟುಂಬಕ್ಕೆ ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದಿಂದ 36,211 ರೂ. ಧನಸಹಾಯ ನೀಡಲಾಗಿದೆ. ಸರ್ಕಾರವು ಮಾನವೀಯತೆ ಆಧಾರದ ಮೇಲೆ ಮೃತಪಟ್ಟ ನೌಕರರ ಮನೆಯವರಿಗೆ ಹೊರಗುತ್ತಿಗೆ ಆಧಾರದಲ್ಲಿ ಕೆಲಸ ಕಲ್ಪಿಸಿ ಅವರ ಕುಟುಂಬಕ್ಕೆ ಆಸರೆಯಾಗಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಕೋವಿಡ್‌ನಂತಹ ಸಂಕಷ್ಟದ ಸಂದರ್ಭದಲ್ಲಿ ಹೊರಗುತ್ತಿಗೆ ನೌಕರರು ಪ್ರಾಣದ ಹಂಗು ತೆ-ಊರೆದು ಕಾರ್ಯನಿರ್ವಹಿಸಿದ್ದಾರೆ. ಆದರೆ, ಇತ್ತೀಚೆಗೆ ಹೊರಗುತ್ತಿಗೆ ಪದ್ಧತಿಯಲ್ಲಿಯೂ ಕೂಡ ಮೀಸಲಾತಿಯನ್ನು ತಂದು ನೌಕರರನ್ನು ಇಕ್ಕಟ್ಟಿಗೆ ಸುಲುಕಿಸುವ ಪ್ರಯತ್ನ ಸರ್ಕಾರ ಮಾಡುತ್ತಿದೆ. ಮೀಸಲಾತಿ ಜಾರಿಯಾದರೆ ಹೊರಗುತ್ತಿಗೆ ಆಧಾರದಲ್ಲಿ ದುಡಿಯುತ್ತಿರುವ ನೌಕರರ ಕುಟುಂಬಗಳು ಬೀದಿಗೆ ಬರುತ್ತವೆ. ಮೀಸಲಾತಿ ತಂದರೂ ಕೂಡ ಈಗ ಕೆಲಸ ನಿರ್ವಹಿಸುತ್ತಿರುವ ನೌಕರರ ಕೆಲಸವನ್ನು ಕಿತ್ತುಕೊಳ್ಳಬಾರದು. ಈ ಬಗ್ಗೆ ಜಿಲ್ಲಾಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಡಿಎಚ್‌ಓ ಅವರಿಗೆ ಮನವಿ ನೀಡಲು ನಿರ್ಧರಿಸಲಾಗಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾ ಘಟಕದ ಪದಾಧಿಕಾರಿಗಳು ಉಪಸ್ಥಿತರಿದ್ದರು.

ಗದಗ ಜಿಲ್ಲೆಯಾದ್ಯಂತ 13 ಹೊರಗುತ್ತಿಗೆ ನೌಕರರನ್ನು ಈಗಾಗಲೇ ಕೆಲಸದಿಂದ ವಜಾಗೊಳಿಸಲಾಗಿದೆ. ಆದರೆ, ನಿಖರ ಕಾರಣವನ್ನು ತಿಳಿಸಿಲ್ಲ. ಹೀಗಾಗಿ ಅವರ ಕುಟುಂಬಗಳು ಈಗ ಬೀದಿಗೆ ಬಂದಿದ್ದು, ಕೂಡಲೇ ಅವರನ್ನು ಮರಳಿ ಕೆಲಸಕ್ಕೆ ಹಾಜರುಪಡಿಸಬೇಕು. ಈ ಬಗ್ಗೆ ಡಿಎಚ್‌ಓ ಹಾಗೂ ಜಿಲ್ಲಾಧಿಕಾರಿಗಳ ಗಮನಕ್ಕೆ ತಂದು ನಂತರ ಟೆಂಡರ್ ಹಿಡಿದ ಏಜೆನ್ಸಿಯವರಿಗೂ ಮನವಿ ಮಾಡಲಾಗುವುದು ಎಂದು ತಿಳಿಸಿದರು.

### ಎಸ್.ಎಂ. ಭೂಮರಡ್ಡಿ ಪದವಿಪೂರ್ವ ಕಾಲೇಜಿನಲ್ಲಿ ವಿವಿಧ ಚಟುವಟಿಕೆಗಳ ಉದ್ಘಾಟನೆ

## ಶಿಕ್ಷಕರು ವಿದ್ಯಾರ್ಥಿಗಳಿಗೆ ಮಾದರಿಯಾಗಬೇಕು

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದೇಶದ ಭವಿಷ್ಯದ ಶಕ್ತಿಯಾಗಿರುವ ವಿದ್ಯಾರ್ಥಿ ಸಮೂಹಕ್ಕೆ ಯಾವ ದೃಷ್ಟಿಕೋನದಿಂದ ನೋಡಿದರೂ ಸಹ ಶಿಕ್ಷಕರು ಮಾದರಿಯಾದರೆ ಮಾತ್ರ ವಿದ್ಯಾರ್ಥಿಗಳಲ್ಲಿ ನೈತಿಕತೆ ಮೂಡಲು ಸಾಧ್ಯ ಎಂದು ಹುಲಕೋಟಿಯ ಡಾ.ಅರ್ಜುನ ಗೊಳಸಂಗಿ ಹೇಳಿದರು.

ಸ್ಥಳೀಯ ಎಸ್.ಎಂ. ಭೂಮರಡ್ಡಿ ಪದವಿಪೂರ್ವ ಕಾಲೇಜಿನಲ್ಲಿ ಸೋಮವಾರ ನಡೆದ 2024-25ನೇ ಸಾಲಿನ ಸಾಹಿತ್ಯಿಕ, ಸಾಂಸ್ಕೃತಿಕ, ಕ್ರೀಡೆ ಹಾಗೂ ಎನ್‌ಎಸ್‌ಎಸ್ ಚಟುವಟಿಕೆಗಳ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು.

ಸಮಯಪಾಲನೆ, ಶಿಸ್ತು ಹಾಗೂ ಸಂಯಮದ ಪಾಠಗಳೊಂದಿಗೆ ಆಚಾರ-ವಿಚಾರ ಮತ್ತು ಸಂಸ್ಕೃತಿಯ ಬಗ್ಗೆ ಗಂಟೆಗಟ್ಟಲೆ ಮಾತನಾಡುವ ಶಿಕ್ಷಕರು ಹಾಗೂ ಉಪನ್ಯಾಸಕರು ಅವುಗಳನ್ನು ಮೊದಲು ಅಳವಡಿಸಿಕೊಳ್ಳಲು ಮುಂದಾಗಬೇಕು. ಅಂದಾಗ ವಿದ್ಯಾರ್ಥಿಗಳಿಗೆ ಮೊದಲ ಮಾದರಿ ವ್ಯಕ್ತಿಯಾಗಿ ಬೋಧಕ ಸಿಬ್ಬಂದಿ ನಿಲ್ಲುತ್ತಾರೆ. ಹೀಗಾಗಿ ಶಿಕ್ಷಕರು ತೆರೆದ ಪುಸ್ತಕದಂತಿರಬೇಕು ಎಂದರು.



ಗವಿವಿ ಸಂಘದ ಆಡಳಿತಾಧಿಕಾರಿ ಪ್ರಶಾಂತ ಶಿವಪ್ಪಗೌಡರ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಯಾಗಬೇಕಾದರೆ ಪಠ್ಯದ ಜತೆಗೆ ಕ್ರೀಡೆ, ಎನ್‌ಎಸ್‌ಎಸ್ ಸೇರಿ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ ದೈಹಿಕ ಹಾಗೂ ಮಾನಸಿಕ ಆರೋಗವನ್ನು ಕಾಪಾಡಿಕೊಳ್ಳಲು ಸಹಾಯಕವಾಗಲಿದೆ ಎಂದರು.


ಪದವಿ ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎನ್. ಶಿವರಡ್ಡಿ ಮಾತನಾಡಿದರು. 2023-24ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಹಾಗೂ ಸಾಧನೆ ಮಾಡಿದ ಉಪನ್ಯಾಸಕರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಾದ ಸೌಂದರ್ಯ ನಿಂಬಲಗುಂದಿ, ಕಾರ್ತಿಕ್ ಬಿ.ಎನ್, ಉಪನ್ಯಾಸಕರಾದ ಎ.ಎಸ್. ವಡ್ಡರ, ಎಸ್.ಎನ್. ವಾಲಿಕಾರ, ಎಸ್. ಕೆ. ಕಟ್ಟಿಮನಿ, ಎಂ.ಎಲ್. ಕ್ವಾಟಿ, ವಿ.ಎಂ. ಜೂಚನಿ ಹಾಗೂ ಮಂಜುನಾಥ ನಾಗರಾಳ, ಶ್ರೀಕಾಂತ ಪೂಜಾರ, ಸುನೀಲ್ ಬಡ್ಡಿವಡ್ಡರ ಸೇರಿ ಬೋಧಕ-ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಇದ್ದರು.

ಕಾಲೇಜಿನ ಪ್ರಾಚಾರ್ಯ ಜೆ.ಬಿ. ಗುಡಿಮನಿ ಮಾತನಾಡಿ, ಸ್ಪರ್ಧಾತ್ಮಕ ಜಗತ್ತಿನಲ್ಲಿ ಗೆಲುವು ಸಾಧಿಸಲು ನಿರಂತರ ಅಭ್ಯಾಸದ ಜತೆಗೆ ಸಿಕ್ಕ ಅವಕಾಶಗಳನ್ನು ಬಳಸಿಕೊಳ್ಳುವ ಗುಣವನ್ನು ಮೈಗೂಡಿಸಿಕೊಂಡರೆ ಪ್ರತಿ ಹಂತದಲ್ಲೂ ದೊರಕುವ ಸೋಲು-ಗೆಲುವಿನ ಅನುಭವ ವಿದ್ಯಾರ್ಥಿಗಳನ್ನು ಗಟ್ಟಿಗೊಳಿಸುತ್ತವೆ. ಹೀಗಾಗಿ ಪ್ರತಿ ಪರೀಕ್ಷೆಗಳನ್ನು ಸಂಭ್ರಮದಂತೆ ಮತ್ತು ನಿರ್ಣಾಯಕ ಎನ್ನುವಂತೆ ಪರೀಕ್ಷೆಗಳಿಗೆ ತಯಾರಿ ನಡೆಸಬೇಕು. ಅಂದಾಗ ಮಾತ್ರ ಜೀವನದಲ್ಲಿ ಎದುರಾಗುವ ಸವಾಲುಗಳನ್ನು ಸುಲಭವಾಗಿ ಎದುರಿಸಲು ಸಾಧ್ಯ ಎಂದರು.

## ಮೊಹರಂ ಹಬ್ಬಕ್ಕೆ ಹುಲಿವೇಷದ ಮೆರುಗು





■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದೊಂದು ವಾರದಿಂದ ಸುರಿಯುತ್ತಿರುವ ಜಿಟಿಜಿಟಿ ಮಳೆಯ ನಡುವೆಯೂ ಪಟ್ಟಣ ಸೇರಿ ತಾಲೂಕಿನೆಲ್ಲೆಡೆ ಮೊಹರಂ ಹಬ್ಬವನ್ನು ಸಂಪ್ರದಾಯಬದ್ಧವಾಗಿ ಆಚರಿಸಲು ಜನತೆ ಸನ್ನದ್ಧರಾಗಿದ್ದಾರೆ.

ಹಿಂದೂ-ಮುಸ್ಲಿಮರ ಭಾವೈಕ್ಯತೆ ಸಾರುವ ಮೊಹರಂ ಹಬ್ಬದ ಆಚರಣೆಯ ಹಿನ್ನೆಲೆಯಲ್ಲಿ ಎಲ್ಲೆಡೆ ಮೊಹರಂ ಹುಲಿಗಳದ್ದೇ ಅಬ್ಬರ ಕಂಡು ಬರುತ್ತಿದೆ. ಹಸೇನ-ಹುಸೇನರು ವೀರ ಸ್ವರ್ಗವನ್ನಪ್ಪಿದ ಆಚರಣೆಯ ಹಿನ್ನೆಲೆಯಲ್ಲಿ ಆಚರಿಸುವ ಮೊಹರಂ ಹಬ್ಬದ ಸಂದರ್ಭದಲ್ಲಿ ನಂಬಿಕೆಯಂತೆ ಪ್ರಾಯಶ್ಚಿತ್ತ ಮತ್ತು ಹರಕೆಗಾಗಿ ಹುಲಿ ವೇಷ ಧರಿಸಿ ಹಬ್ಬಕ್ಕೆ ಮೆರಗು ತರುತ್ತಾರೆ. ಹಿಂದೂ ಮುಸ್ಲಿಮರೆಲ್ಲರೂ ಮೈತುಂಬ ಹುಲಿ ವೇಷ ಬರೆಸಿಕೊಂಡು ಹಲಗೆ ಬಾರಿಸುತ್ತಾ ನಾದಕ್ಕೆ ತಕ್ಕಂತೆ ಕುಣಿಯುತ್ತಾರೆ. ಅಳ್ಳೊಳ್ಳಿ ಬವ್ವಾ ವೇಷದೊಂದಿಗೆ ಮಕ್ಕಳನ್ನು, ಜನರನ್ನು ಆಕರ್ಷಿಸುತ್ತಾ ಕಾಣಿಕೆ ಸ್ವೀಕರಿಸುತ್ತಾರೆ. ಪಟ್ಟಣ ಸೇರಿ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಈ ವೇಷಧಾರಿ ಭಕ್ತರು ಎಲ್ಲರ ಮನರಂಜಿಸುತ್ತಿದ್ದಾರೆ.

ಪಟ್ಟಣ ಸೇರಿ ತಾಲೂಕಿನಾದ್ಯಂತ ನಿಗದಿತ ಸ್ಥಳದಲ್ಲಿ ಪಾಂಜಾಗಳ ಪ್ರತಿಷ್ಠಾನೆ ಮಾಡಲಾಗಿದ್ದು, ಮಂಗಳವಾರ ಕತ್ತಲರಾತ್ರಿ, ಬುಧವಾರ ಪಾಂಜಾಗಳ ಮೆರವಣಿಗೆ ನಡೆಯಲಿದೆ. ಪಟ್ಟಣದ ಯುವ ಕಲಾವಿದ, ಕಲಾ ಶಿಕ್ಷಕ ಪ್ರವೀಣ ಗಾಯಕರ ಹುಲಿವೇಷ ಬರೆಯುವದರಲ್ಲಿ ಸಿದ್ಧಹಸ್ತರು. ಪ್ರತಿವರ್ಷ ಲಕ್ಷ್ಮೇಶ್ವರ ಮತ್ತು ಸುತ್ತಲಿನ ಹತ್ತಾರು ಗ್ರಾಮಗಳ ಜನರಿಗೆ ಹುಲಿವೇಷದ ಬಣ್ಣ ಬರೆಯುವ ಪ್ರವೀಣ ತಮ್ಮ ಪ್ರಾವೀಣ್ಯತೆ ಮೂಲಕ ಎಲ್ಲರ ಮೆಚ್ಚುಗೆ ಗಳಿಸಿದ್ದಾರೆ.

ಹಬ್ಬದ ಮುನ್ನಾದಿನ ಹುಲಿವೇಷಧಾರಿಗಳಿಗೆ ಬಣ್ಣ ಬಳಿಯುವ ಕಾಯಕದಲ್ಲಿ ಮನೆಮಂದಿಯೆಲ್ಲಾ ನಿರತರಾಗಿರುತ್ತಾ-ರೆ. ಇವರ ಕಲಾ ನೈಪುಣ್ಯತೆಯಿಂದ ನೂರಾರು ಹುಲಿವೇಷಧಾರಿಗಳು ಮೊಹರಂ ಹಬ್ಬಕ್ಕೆ ರಂಗು ನೀಡುತ್ತಿದ್ದಾರೆ. ಇತ್ತೀಚಿನ ದಿನಗಳಲ್ಲಿ ನಗರ ಪ್ರದೇಶಗಳಲ್ಲಿ ಹುಲಿವೇಷ ಬರೆಸಿಕೊಳ್ಳುವವರ ಸಂಖ್ಯೆ ತೀರಾ ಕಡಿಮೆಯಾದರೂ ಗ್ರಾಮೀಣ ಪ್ರದೇಶಗಳಲ್ಲಿ ಕಡಿಮೆಯಾಗಿಲ್ಲ. ಕುಟುಂಬದ ಮೂಲ ಕಲಾಸೇವೆಯನ್ನು ಇದೀಗ ತನ್ನ ಸಂಗಡಿಗರೊಂದಿಗೆ ಸೇರಿ ಮುಂದುವರೆಸಿಕೊಂಡು ಹೋಗುತ್ತಿದ್ದಾರೆ.

### ಯೋಗ ಸಾಧಕರಿಂದ ಧ್ಯಾನ-ಸತ್ಸಂಗ ಕಾರ್ಯಕ್ರಮ

## ಸಂತೃಪ್ತ ಜೀವನಕ್ಕೆ ಯೋಗ ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಯೋಗ, ಧ್ಯಾನ, ಸತ್ಸಂಗಗಳು ತನ್ನನ್ನು ತಾನು ಅರಿಯುವಂತೆ ಮಾಡುವ ಸಂಸ್ಕಾರಯುತ ಶಕ್ತಿಯನ್ನು ಹೊಂದಿವೆ. ಮನುಷ್ಯ ಆರೋಗ್ಯ, ಶಾಂತಿ, ನೆಮ್ಮದಿ, ಸಂತೃಪ್ತ ಜಿವನ ನಡೆಸಲು ನಿತ್ಯದ ಬದುಕಿನಲ್ಲಿ ಇವುಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.



ಅವರು ಪಟ್ಟಣದ ಚನ್ನಮ್ಮನ ವನದಲ್ಲಿ ಡಾ.ಜೀವಂದರ ಕೇತಪ್ಪನವರ ನೇತೃತ್ವದಲ್ಲಿ ವಸುಂಧರಾ ವಾರಿಯರ್ಸ್ ಮಹಿಳಾ ಯೋಗ ಸಾಧಕರಿಂದ ನಡೆದ ಧ್ಯಾನ ಮತ್ತು ಸತ್ಸಂಗ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡುತ್ತ, ಇಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ನಿತ್ಯದ ಒತ್ತಡದ ಜೀವನ, ಕಲುಷಿತ ವಾತಾವರಣ, ನೀರು, ಆಹಾರದಿಂದ ಅನಾರೋಗ್ಯಕರ ಬದುಕಿನಿಂದ ಹೊರ ಬಂದು ಆರೋಗ್ಯಕರ, ಸ್ವಾಸ್ಥ್ಯ ಸಮಾಜದ ನಿರ್ಮಾಣಕ್ಕಾಗಿ ಧ್ಯಾನ, ಸಂತ್ಸಂಗ ಮತ್ತು ಪಿರಮಿಡ್ ಧ್ಯಾನ ಅತ್ಯಂತ ಅವಶ್ಯಕವಾಗಿದೆ.

ಧ್ಯಾನ ಬದುಕಿಗೆ ಶಾಂತಿ, ನೆಮ್ಮದಿ ಜತೆಗೆ ದೈಹಿಕ, ಮಾನಸಿಕ ದೃಡತೆಯನ್ನುಂಟು ಮಾಡುತ್ತದೆ. ಮನುಷ್ಯ ಇಂದ್ರಿಯ ನಿಗ್ರಹ, ಸಮಚಿತ್ತಭಾವ, ಧರ್ಮ, ಸಂಸ್ಕಾರ, ಮೌಲ್ಯಯುತ ಗುಣಗಳನ್ನು ಹೊಂದಲು ಧ್ಯಾನ, ಸತ್ಸಂಗ ಅವಶ್ಯವಾಗಿದೆ ಎಂದರು.

ಕಾರ್ಯಕ್ರಮ ಸಂಘಟಕ, ಆಧ್ಯಾತ್ಮ ಚಿಂತಕ ಸುಭಾಸ ಓದುನವರ ಪ್ರಾಸ್ತಾವಿಕ ಮಾತನಾಡಿ, ಇಂದಿನ ಸಮಾಜದಲ್ಲಿ ತಂತ್ರಜ್ಞಾನದ ಅತಿಯಾದ ಬಳಕೆಯಿಂದ ಜನರು ಧ್ಯಾನ-ಸತ್ಸಂಗ, ಆಧ್ಯಾತ್ಮಿಕತೆಯಲ್ಲಿ ತೊಡಗಿಸಿಕೊಳ್ಳುವುದು ಕಡಿಮೆಯಾಗುತ್ತಿದೆ. ಈ ಸಂದರ್ಭದಲ್ಲಿ ಯೋಗ, ಧ್ಯಾನ, ಸತ್ಸಂಗ ಕಾರ್ಯಕ್ರಮಗಳು ಜನರ ಮನಸ್ಸನ್ನು ಕಟ್ಟಿ ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಸಹಾಯಕಾರಿಯಾಗಿವೆ ಎಂದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ, ಈಶ್ವರೀಯ ವಿ.ವಿಯ ರಾಜಯೋಗಿನಿ ಬಿ.ಕೆ ನಾಗಲಾಂಬಿಕಾ, ಪೂರ್ಣಿಮಾ ಆಣೆಪ್ಪನವರ, ಜಯಲಕ್ಷ್ಮೀ ಗಡ್ಡದೇವರಮಠ, ಚಂಬಣ್ಣ ಬಾಳಿಕಾಯಿ, ಚಂದ್ರಣ್ಣ ಓದುನವರ, ಗುರುಶಾಂತಯ್ಯ ಬಾಳಿಹಳ್ಳಿಮಠ, ಎಂ.ಕೆ. ಕಳ್ಳಿಮಠ, ಎಂ.ಸಿದ್ದಲಿಂಗಯ್ಯ, ಶಂಕರಗೌಡ ಪಾಟೀಲ ಸೇರಿ ಹಲವರಿದ್ದರು. ಕಸಾಪ ತಾಲುಕಾಧ್ಯಕ್ಷ ಈಶ್ವರ ಮೆಡ್ಲೇರಿ, ಪ್ರೊ. ಸೋಮಶೇಖರ ಕೆರಿಮನಿ, ಪ್ರತಿಮಾ ಮಹಾಜನಶೆಟ್ಟರ, ನಿರ್ಮಲಾ ಅರಳಿ ನಿರ್ವಹಿಸಿದರು.

ಯೋಗ ಸಾಧಕರು, ಚಿಂತಕರು, ವಸುಂದರಾ ವಾರಿಯರ್ಸ್ ಮಾರ್ಗದರ್ಶಕರಾದ ಚಿಕ್ಕೋಡಿಯ ಡಾ. ಜೀವಂಧರ ಕೇತಪ್ಪನವರ ಉತ್ತಮ ಜೀವನಕ್ಕಾಗಿ ಧ್ಯಾನ ಮತ್ತು ಪಿರಾಮಿಡ್ ಧ್ಯಾನದ ಮಹತ್ವದ ಕುರಿತು ಮಾತನಾಡುತ್ತಾ, ಇಂದಿನ ತಂತ್ರಜ್ಞಾನದ ಯುಗದಲ್ಲಿ ಅನೇಕ ಸಾಧನಗಳು, ಆಹಾರ ಪದ್ಧತಿ, ಜೀವನಶೈಲಿ ಅನೇಕ ಕಾರಣಗಳಿಂದ ಅಜ್ಞಾನ-ಅನಾರೋಗ್ಯಕ್ಕೊಳಗಾಗುತ್ತಿದ್ದಾರೆ. ಹಿರಿಯರೂ ಸೇರಿ ಮಕ್ಕಳೂ ಸನ್ಮಾರ್ಗ, ಸನ್ನಡತೆ, ಸಂಸ್ಕಾರಹೀನರಾಗುತ್ತಿದ್ದಾರೆ. ಯೋಗ, ಧ್ಯಾನ, ಸತ್ಸಂಗದಿಂದ ಪರಿಪೂರ್ಣ ವ್ಯಕ್ತಿಯಾಗಲು ಸಾಧ್ಯವಾಗುತ್ತದೆ. ನಿತ್ಯದ ಜೀನದಲ್ಲಿ ಸ್ವಲ್ಪ ಸಮಯವಾದರೂ ಇವುಗಳನ್ನು ಅಳವಡಿಸಿಕೊಳ್ಳಬೇಕು ಎಂದರು.

ಈಶ್ವರೀಯ ವಿಶ್ವವಿದ್ಯಾಲಯದಲ್ಲಿ 'ಪತ್ರಿಕಾ ದಿನಾಚರಣೆ'

# ಸಮಾಜಕ್ಕೆ ಪತ್ರಕರ್ತರ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ನರೇಗಲ್

ಸಮಾಜ ಸುಧಾರಣೆಯಲ್ಲಿ ಪತ್ರಿಕೆಗಳ ಪಾತ್ರ ಮಹತ್ವದ್ದು. ಈ ಪತ್ರಿಕೆಗಳಿಗೆ ಸುದ್ದಿ ಬರೆಯುವ ಪತ್ರಕರ್ತರ ಕೊಡುಗೆಯೂ ಅಷ್ಟೇ ಮಹತ್ವದ್ದಾಗಿದೆ. ಆದ್ದರಿಂದ ಅವರನ್ನು ಗೌರವಿಸುವುದು ನಮ್ಮ ಕರ್ತವ್ಯವೆಂದು ತಿಳಿದು ಇಂದು ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಪತ್ರಿಕಾ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಚಾಲಕಿ ಬಿ.ಕೆ. ಸವಿತಕ್ಕ ಹೇಳಿದರು.



ಇಲ್ಲಿನ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕೆಲವು ಸಂದರ್ಭಗಳಲ್ಲಿ ಪತ್ರಕರ್ತರು ತಮ್ಮ ಜೀವದ ಹಂಗು ತೊರೆದು ಸುದ್ದಿಯನ್ನು ಮಾಡಬೇಕಾಗುತ್ತದೆ. ಆ ಸಮಯದಲ್ಲಿ ಅವರಿಗೆ ಸಾರ್ವಜನಿಕರ ಸಹಕಾರ, ಬೆಂಬಲ ಅವಶ್ಯವಿರುತ್ತದೆ. ಈಶ್ವರೀಯ ವಿಶ್ವ ವಿದ್ಯಾಲಯದ ಸುದ್ದಿಗಳನ್ನು ಎಲ್ಲ ಪತ್ರಿಕೆಯವರೂ ಪ್ರಕಟಿಸುತ್ತಿರುವದರಿಂದ ಅವರಿಗೆ ಸಂಸ್ಥೆಯ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಎಂದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಪತ್ರಕರ್ತ ಪ್ರಭುಸ್ವಾಮಿ ಅರವಟಗಿಮಠ, ಇತ್ತೀಚೆಗೆ ಮಾನವರಲ್ಲಿ ಸಂಯಮ ಕಡಿಮೆಯಾಗುತ್ತಿದೆ. ದ್ವೇಷ, ಅಸೂಯೆಗಳು ಹೆಚ್ಚಾಗುತ್ತಿವೆ. ಇವುಗಳಿಂದ ದೂರವಿರಲು ನಾವು ಈಶ್ವರೀಯ ವಿಶ್ವವಿದ್ಯಾಲಯಕ್ಕೆ ಬಂದು ಇಲ್ಲಿನ ಪಾಠ ಬೋಧನೆಯನ್ನು ಕೇಳಿಸಿಕೊಳ್ಳಬೇಕಿದೆ ಎಂದರು.

ಇನ್ನೋರ್ವ ಪತ್ರಕರ್ತ ಈಶ್ವರ ಬೆಟಗೇರಿ ಮಾತನಾಡಿ, ಮನುಷ್ಯನಿಗೆ ಸಮಾಧಾನ, ನೆಮ್ಮದಿ ಸಿಗುವುದು ಈಶ್ವರೀಯ ವಿಶ್ವವಿದ್ಯಾಲಯದಿಂದ ಮಾತ್ರ. ಇಲ್ಲಿನ ಓಂಕಾರ ಸ್ಮರಣೆ ಈಗ ಭಾರತದಲ್ಲಷ್ಟೆ ಅಲ್ಲದೆ ಜಗತ್ತಿನ ತುಂಬ ನಿನಾದಿಸುತ್ತಿದೆ. ನಾವೂ ಮೇಲಿಂದ ಮೇಲೆ ಇಲ್ಲಿಗೆ ಬಂದು ನೆಮ್ಮದಿಯನ್ನು ಪಡೆಯಲು ಪ್ರಯತ್ನಿಸಬೇಕಿದೆ ಎಂದರು.

ಸಭೆಯನ್ನುದ್ದೇಶಿಸಿ ನಿವೃತ್ತ ಮುಖ್ಯ ಶಿಕ್ಷಕ ಅರುಣ ಬಿ.ಕುಲಕರ್ಣಿ ಮಾತನಾಡಿದರು. ವೇದಿಕೆಯ ಮೇಲೆ ಪತ್ರಕರ್ತರಾದ ಮಲ್ಲಯ್ಯ ಗುಂಡಗೋಪುರಮಠ, ಪ್ರಶಾಂತ ಜಕ್ಕಲಿ ಇದ್ದರು. ಸಭೆಯಲ್ಲಿ ರಾಜಣ್ಣ ಭೋಪಳಾಪೂರ, ನಿವೃತ್ತ ಶಿಕ್ಷಕ ಧರ್ಮಾಯತ, ಎಂ.ಎಸ್. ಪೂಜಾರ, ಕಾತರಕಿ, ಹೊಸಮನಿ, ಸೇರಿದಂತೆ ಇನ್ನೂ ಅನೇಕರಿದ್ದರು.

ಪತ್ರಕರ್ತ ಆದರ್ಶ ಕುಲಕರ್ಣಿ ಮಾತನಾಡಿ, ಇಂದು ಈ ಸಂಸ್ಥೆಯಲ್ಲಿ ಪತ್ರಿಕಾ ದಿನಾಚರಣೆಯನ್ನು ಆಚರಿಸುವ ಮೂಲಕ ಹಿಂದಿನಿಂದಲೂ ನಡೆದುಕೊಂಡು ಬಂದಿರುವ ಸಂಪ್ರದಾಯವನ್ನು ಮುಂದುವರೆಸಿದಂತಾಗಿದೆ. ಅದರೊಂದಿಗೆ ಇಲ್ಲಿ ನನ್ನ ಹುಟ್ಟುಹಬ್ಬವನ್ನು ಆಚರಿಸಿದ್ದು ಅತೀವ ಸಂತಸ ತಂದಿದೆ. ಇದರಿಂದ ನನಗೆ ಪರಮೇಶ್ವರನ ಆಶೀರ್ವಾದ ಸಿಕ್ಕಂತಾಗಿದೆ ಎಂದರು.

## ಪದ್ಮ ಶ್ರೇಣಿಯ ಪ್ರಶಸ್ತಿಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಅಂದರೆ ಕಲೆ, ಸಾಹಿತ್ಯ ಮತ್ತು ಶಿಕ್ಷಣ, ಕ್ರೀಡೆ, ವೈದ್ಯಕೀಯ, ಸಮಾಜಸೇವೆ, ವಿಜ್ಞಾನ ಮತ್ತು ಇಂಜಿನಿಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರಿಕ ಸೇವೆ, ವ್ಯಾಪಾರ ಮತ್ತು ಕೈಗಾರಿಕೆ ಇತ್ಯಾದಿಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ವ್ಯಕ್ತಿಗಳಿಗೆ 2025ನೇ ಸಾಲಿನ ಪದ್ಮ ಶ್ರೇಣಿಯ ಪ್ರಶಸ್ತಿಗಳಾದ ಪದ್ಮ ವಿಭೂಷಣ, ಪದ್ಮ ಭೂಷಣ ಮತ್ತು ಪದ್ಮಶ್ರೀ ಪ್ರಶಸ್ತಿಗಳನ್ನು ನೀಡಲು ಕೇಂದ್ರ ಸರ್ಕಾರದಿಂದ ಪ್ರಕಟಿಸಲಾಗಿದೆ.

ವಿಕಲಚೇತನರ ಕ್ಷೇತ್ರಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವ್ಯಕ್ತಿ ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಅತ್ಯುತ್ತಮ ಸೇವೆ ಮಾಡುತ್ತಿರುವ ಸ್ವಯಂ-ಸೇವಾ ಸಂಸ್ಥೆಗಳಲ್ಲಿನ ಅಧ್ಯಕ್ಷರು/ಕಾರ್ಯದರ್ಶಿಗಳಿಗೆ ಪದ್ಮಶ್ರೇಣಿಯ ಪ್ರಶಸ್ತಿಗಳಿಗೆ ಕೇಂದ್ರ ಸರ್ಕಾರದ ನಿಯಮಾವಳಿನುಸಾರ ಆಗಸ್ಟ್ 31ರೊಳಗಾಗಿ ಆಂಗ್ಲ ಭಾಷೆಯಲ್ಲಿ ನಿಗದಿತ ಅರ್ಜಿ ನಮೂನೆಯಲ್ಲಿ ತಿಳಿಸಿರುವ ಎಲ್ಲಾ ಅಂಶಗಳನ್ನು ಭರ್ತಿ ಮಾಡಿ ಸಾಫ್ಟ್ ಕಾಪಿಯನ್ನು ಇ-ಮೇಲ್ ವಿಳಾಸ: uspolitical-dpar@karnataka.gov.in ಗೆ ಆನ್‌ಲೈನ್ ಮೂಲಕ ನಿಗದಿತ ಅವಧಿಯೊಳಗೆ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. 2025ನೇ ಸಾಲಿನ ಪದ್ಮಶ್ರೇಣಿಯ ಪ್ರಶಸ್ತಿಗಳಿಗೆ ಅನ್ವಯಿಸುವ ನಿಯಮಾವಳಿಗಳನ್ನು ಜಾಲತಾಣ https://www.padmaawards.gov.in/ ದಲ್ಲಿ ಲಭ್ಯವಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ವಿಕಲಚೇತನರ ಹಾಗೂ ಸಬಲೀಕರಣ ಇಲಾಖೆ, ಗದಗ, ಜಿಲ್ಲಾಡಳಿತ ಭವನ, ನೆಲಮಹಡಿ, ಕೊಠಡಿ ಸಂಖ್ಯೆ: 029ರ ದೂರವಾಣಿ ಸಂಖ್ಯೆ: 08372-220419ಗೆ ಸಂಪರ್ಕಿಸಬಹುದಾಗಿದೆ.

ಪತ್ರಿಕಾ ದಿನಾಚರಣೆ, ಸನ್ಮಾನ ಕಾರ್ಯಕ್ರಮದಲ್ಲಿ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ

# ಆಗಸ್ಟ್ ಅಂತ್ಯದಲ್ಲಿ ಕಸಾಪ ಜಿಲ್ಲಾ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಕೂಲ ಸಂದರ್ಭದಲ್ಲಿಯೂ ಸಹ ಸತ್ಯವನ್ನು ಹೊರಗೆಳೆಯುವ ಮೂಲಕ ಪತ್ರಿಕೆಗಳು ತಮ್ಮ ಜವಾಬ್ದಾರಿ ನಿರ್ವಹಿಸುತ್ತ ಜನರಿಗೆ ಹತ್ತಿರುವಾಗುತ್ತಾ ಬಂದಿವೆ. ಹೀಗಾಗಿ ದೇಶದಲ್ಲಿ ಮಾಧ್ಯಮವನ್ನು ಪ್ರಜಾಪ್ರಭುತ್ವದ 4ನೇ ಸ್ತಂಭ ಎಂದು ಕರೆಯಲಾಗುತ್ತಿದೆ. ಪ್ರತಿಕ್ಯೋದ್ಯಮದ ರೀತಿ, ಸ್ವರೂಪ ಬದಲಾಗಿದ್ದರೂ ಸಹ ಪತ್ರಿಕೆಗಳನ್ನು ಓದುವ ಹವ್ಯಾಸಕ್ಕೆ ಸರಿಸಮನಾದ ಹವ್ಯಾಸ ಮತ್ತೊಂದಿಲ್ಲ. ಆಗಸ್ಟ್ ಕೊನೆಯ ವಾರದಲ್ಲಿ ಕಸಾಪ ಜಿಲ್ಲಾ ಸಮ್ಮೇಳನ ನಡೆಸುವ ಕುರಿತು ಈಗಾಗಲೇ ಸಚಿವ ಎಚ್.ಕೆ. ಪಾಟೀಲ ಹಾಗೂ ಶಾಸಕ ಜಿ.ಎಸ್. ಪಾಟೀಲ ಅವರೊಂದಿಗೆ ಚರ್ಚಿಸಲಾಗಿದೆ. ಮುಂದಿನ ದಿನಗಳಲ್ಲಿ ಸಮ್ಮೇಳನದ ದಿನಾಂಕವನ್ನು ಘೋಷಿಸುವದಾಗಿ ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ತಿಳಿಸಿದರು.




ಪಟ್ಟಣದ ಗವಿಮಠದಲ್ಲಿ ಕನ್ನಡ ಸಾಹಿತ್ಯ ಪರಿಷತ್ತು ತಾಲೂಕಾ ಘಟಕದಿಂದ ಹಮ್ಮಿಕೊಂಡಿದ್ದ ಪತ್ರಿಕಾ ದಿನಾಚರಣೆ ಹಾಗೂ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾನಿಪ ಸಂಘದ ತಾಲೂಕಾಧ್ಯಕ್ಷ ಶ್ರೀಶೈಲ ಕುಂಬಾರ ಮಾತನಾಡಿ, ಪಟ್ಟಣ ಹಾಗೂ ತಾಲೂಕಿನಲ್ಲಿ ಕೆಲ ಘಟನೆಗಳು ರಾಜ್ಯದ ಗಮನ ಸೆಳೆಯುವ ವರದಿಗಳಾಗಿವೆ. ಇನ್ನೂ ಕೆಲವು ಸುದ್ದಿಗಳಿಗೆ ಬಂದ ಒತ್ತಡವನ್ನು ಬದಿಗೊತ್ತಿ ಘಟನೆಯನ್ನು ವರದಿ ಮಾಡುವ ಮೂಲಕ ನಮ್ಮ ಕರ್ತವ್ಯವನ್ನು ನಿರ್ವಹಿಸುತ್ತಾ ಬರುತ್ತಿದ್ದೇವೆ ಎಂದರು.

ಹಿರಿಯ ಪತ್ರಕರ್ತ ರಾಘವೇಂದ್ರ ಕುಲಕರ್ಣಿ, ಪುಂಡಲೀಕ ಕಲ್ಲಿಗನೂರ ಮಾತನಾಡಿದರು.

ಕಸಾಪ ತಾಲೂಕಾಧ್ಯಕ್ಷ ಎ.ಪಿ. ಗಾಣಿಗೇರ, ಪತ್ರಕರ್ತ ಶಿವಕುಮಾರ ಶಶಿಮಠ, ಶೀತಲ ಓಲೇಕಾರ, ಎಸ್.ಐ. ಪತ್ತಾರ, ಎಸ್.ಎಸ್. ನರೇಗಲ್, ಬಿ.ವಿ. ಮುನವಳ್ಳಿ, ಬಿ.ಟಿ. ಹೊಸಮನಿ, ಅರವಿಂದ ಕವಡಿಮಟ್ಟಿ, ಆರ್.ವಿ. ಡೊಳ್ಳಿನ ಇದ್ದರು.

ನಿವೃತ್ತ ಉಪನ್ಯಾಸಕ ಬಿ.ಎ. ಕೆಂಚರಡ್ಡಿ ಮಾತನಾಡಿ, ಈ ಹಿಂದೆ ಪತ್ರಿಕೆಗಳಿಗೆ ಸುದ್ದಿ ಬರೆದು ಕಳುಹಿಸುವುದು ಸಾಹಸದ ಮತ್ತು ಸಾರ್ಥಕತೆಯ ಕೆಲಸವಾಗಿತ್ತು. ಅಂದು ತಂತ್ರಜ್ಞಾನ ಬಳಕೆ ಇರದಿದ್ದರೂ ಅಂದಿನ ವರದಿಗಾರರು ಸಾಮಾಜಿಕ ನ್ಯಾಯ ಹಾಗೂ ಪಟ್ಟಣ ಸೇರಿ ಸುತ್ತ ನಡೆಯುವ ಘಟನಗೆಳ ವಸ್ತುನಿಷ್ಠ ವರದಿ ಮಾಡುವ ಮೂಲಕ ತಮ್ಮ ಬದ್ಧತೆಯನ್ನು ಪ್ರದರ್ಶಿಸಿದ್ದಾರೆ. ಆದರೆ ಪ್ರಸ್ತುತ ದಿನಮಾನದಲ್ಲಿ ಕ್ಷಣಾರ್ಧದಲ್ಲಿ ಸುದ್ದಿಗಳು ನಮ್ಮ ಅಂಗೈಯಲ್ಲಿ ಬಂದು ಕುಳಿತಿರುತ್ತವೆ. ತಾಲೂಕಿನಲ್ಲಿ ಪತ್ರಕರ್ತರಿಗೆ ವಿಶೇಷ ಗೌರವ ಹಾಗೂ ಸ್ಥಾನಮಾನ ಸಿಕ್ಕಿದ್ದು ಅದನ್ನು ಉಳಿಸಿಕೊಂಡು ಹೋಗುವ ಜವಾಬ್ದಾರಿ ಇಂದಿನ ಪತ್ರಕರ್ತರ ಮೇಲಿದೆ ಎಂದರು.

ಆರೋಗ್ಯ ಇಲಾಖೆಯ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘದಿಂದ ಮನವಿ

# ಸಮಾನ ಕೆಲಸಕ್ಕೆ ಸಮಾನ ವೇತನ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ದುಂಡಪ್ಪ ಮಾನ್ವಿ ಆಸ್ಪತ್ರೆಯಲ್ಲಿ ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆಯ ಹೊರಗುತ್ತಿಗೆ ನೌಕರರ ಸಂಘದಿಂದ ಮುಖ್ಯ ಜಿ.ಪಂ ಕಾರ್ಯನಿರ್ವಾಹಣಾಧಿಕಾರಿಗಳ ಮೂಲಕ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಮುಖ್ಯಮಂತ್ರಿಗಳಿಗೆ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಿಗೆ ಮನವಿ ಸಲ್ಲಿಸಿದರು.




ಮನವಿ ಸಲ್ಲಿಸಿ ಮಾತನಾಡಿದ ಎಚ್.ಎನ್. ರಮೇಶ, ಕರ್ನಾಟಕ ರಾಜ್ಯ ಆರೋಗ್ಯ ಇಲಾಖೆ ವಿವಿಧ ವೃಂದದ ಹೊರಗುತ್ತಿಗೆ ನೌಕರರ ಸಂಘ ಆರೋಗ್ಯ ಇಲಾಖೆಯಲ್ಲಿ ಹತ್ತಾರು ವರ್ಷಗಳಿಂದ ಹೊರಗುತ್ತಿಗೆ ಆಧಾರದಲ್ಲಿ ಸುಮಾರು 9 ಸಾವಿರ ನೌಕರರು ಕಾರ್ಯ ನಿರ್ವಹಿಸುತ್ತಿದ್ದು, ಸರ್ಕಾರವು ಒಂದು ರಾಜಕೀಯ ಸಂಸ್ಥೆಗೆ ಟೆಂಡರ್ ನೀಡಿ ನೌಕರರನ್ನು ಶೋಷಿಸುತ್ತಿದೆ. ರಾಜ್ಯದಲ್ಲಿ ಸುಮಾರು 2.50 ಲಕ್ಷ ಹುದ್ದೆಗಳು ಖಾಲಿ ಇದ್ದು, ಭರ್ತಿ ಮಾಡದೇ ಗುತ್ತಿಗೆ ಪದ್ಧತಿಯನ್ನು ಮುಂದುವರಿಸಿದೆ. ಇದರಿಂದ ನೌಕರರಿಗೆ ಸರಿಯಾದ ಸಮಯಕ್ಕೆ ವೇತನ ದೊರೆ-ಯದೇ ಜೀವನ ಸಾಗಿಸಲು ತೊಂದರೆಯಾಗುತ್ತಿದೆ.

ಹೊರಗುತ್ತಿಗೆದಾರರಿಗೆ ಸರ್ಕಾರದಿಂದ ಯಾವುದೇ ಪಿಂಚಣಿ, ಭವಿಷ್ಯ ನಿಧಿ ಸೌಲಭ್ಯಗಳಿಂದ ವಂಚಿತರಾಗಿದ್ದೇವೆ. ನಮ್ಮ ನ್ಯಾಯಯುತ ಬೇಡಿಕೆಗಳಾದ ಸಮಾನ ಕೆಲಸಕ್ಕೆ ಸಮಾನ ವೇತನ, ಖಾಸಗಿ ಸಂಸ್ಥೆ ಬದಲಾಗಿ ಸರ್ಕಾರಿ ಸಂಸ್ಥೆ ಅಥವಾ ನಿಗಮ ಮಂಡಳಿ ಮೂಲಕ ವೇತನ ಪಾವತಿ ಮಾಡುವ ವ್ಯವಸ್ಥೆ ಕಲ್ಪಿಸುವುದು, ಸೇವಾ ಭದ್ರತೆ ನೀಡುವುದು ಇವೇ ಮುಂತಾದ ಬೇಡಿಕೆಗಳನ್ನು ಈಡೇರಿಸಬೇಕೆಂದು ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಅಕ್ಷಯ ಡಿ.ಎಮ್. ಗೌಡ, ಶಿವಕುಮಾರ ಆರ್, ಸಿದ್ದಪ್ಪ ಬಿ, ಶ್ರೀಶೈಲ, ಮಂಜುಳಾ, ಸಾವಿತ್ರಿ ಬಿ.ಇಪ್ಪರಗಿ, ರವೀಂದ್ರ ಬಿ., ನವೀನಕುಮಾರ ಬಿ., ಪ್ರವೀಣ ಶಿಗ್ಲಿಯವರ, ಶ್ರೀಶೈಲ ಕರಿಬೀಮಗೋಳ, ಕೇದಾರೇಶ್ವರ ದೊಡ್ಡಮನಿ, ಸುರೇಶ ಜೋಗಿನ, ಕೆ.ಎಚ್. ಅಮೀರಅಲಿ, ರಂಜಾನಸಾಬ ಹಳ್ಯಾಳ, ಶರಣಪ್ಪಗೌಡ ವಿ.ಗೌಡ್ರ, ಗುರುಪಾದಪ್ಪ ಜಿ.ಪಟ್ಟಣಶೆಟ್ಟಿ, ಮಂಜು ಮಡಿವಾಳರ ಆನಂದ ದೊಡ್ಮನಿ, ಹೇಮಣ್ಣ ಪೂಜಾರ ಹಾಗೂ ಸದಸ್ಯರು ಉಪಸ್ಥಿತರಿದ್ದರು.




ಅಖಿಲ ಭಾರತ ವೀರಶೈವ ಮಹಾಸಭಾ ಗದಗ ತಾಲೂಕು ಅಧ್ಯಕ್ಷರಾಗಿ ಆಯ್ಕೆಯಾದ ಮಹೇಶ ಚಂದ್ರಶೇಖರಪ್ಪ ಕೋಟಿಯವರನ್ನು ಆಲಮಟ್ಟಿ ಅಚ್ಚುಕಟ್ಟು ಪ್ರಾಧಿಕಾರದ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಯಂಡಿಗೇರಿ ಹಾಗೂ ಅಶೋಕ ಗೋಡಚಿಯವರು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಕೋಟಿ ಹಾಗೂ ಗೋಡಚಿ ಪರಿವಾರದವರು ಭಾಗವಹಿಸಿದ್ದರು.

# ನೆಮ್ಮದಿ ನೀಡಿದ ಪುನರ್ವಸು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಳೆದ ಮೂರ್ನಾಲ್ಕು ದಿನಗಳಿಂದ ಮೋಡಕವಿದ ವಾತಾವರಣದ ನಡುವೆ ಜಿಟಿ ಜಿಟಿ ಮಳೆ ಸುರಿಯುತ್ತಿದೆ. ಕಳೆದೊಂದು ತಿಂಗಳಿಂದ ಮಳೆ ಕೊರತೆಯಿಂದ ಚಿಂತಾಜನಕ ಸ್ಥಿತಿಯಲ್ಲಿರುವ ರೈತ ಸಮುದಾಯಕ್ಕೆ ಪುನರ್ವಸು ಮಳೆ ಕೊನೆ ಚರಣದಲ್ಲಿ ಆಸರೆಯಾಗಿದೆ.

ಆರಿದ್ರ ಮತ್ತು ಪುನರ್ವಸು ಮಳೆಯಾಗದ್ದರಿಂದ ಹೆಸರು, ಹತ್ತಿ, ಶೇಂಗಾ ಬಿತ್ತನೆಯಾಗದೇ ರೈತರು ಚಿಂತೆಗೀಡಾಗಿದ್ದರು. ಇದು ರೈತರ ಜಂಘಾಬಲವನ್ನೇ ಉಡುಗಿಸಿತ್ತು. ಆದರೆ 2 ದಿನಗಳಿಂದ ಮೋಡಕವಿದ ವಾತಾವರಣದ ಜತೆಗೆ ಸುರಿಯುತ್ತಿರುವ ಜಡಿ ಮಳೆ ರೈತರ ಮೊಗದಲ್ಲಿ ಕೊಂಚ ನೆಮ್ಮದಿ ಮೂಡಿಸಿದೆ. ಇದೀಗ ಬಹುತೇಕ ರೈತರು ಗೋವಿನಜೋಳ, ಹತ್ತಿ, ಶೇಂಗಾ, ಈರುಳ್ಳಿ ಬೆಳೆಗೆ ರಸಗೊಬ್ಬರ ಹಾಕುತ್ತಿದ್ದಾರೆ. ಆದರೆ ದೊಡ್ಡ ಮಳೆಯಾಗದೇ ಜಿಟಿ ಜಿಟಿ ಮಳೆಯಿಂದ ಮತ್ತು ತಂಪಾದ ವಾತಾವರಣದಿಂದ ಬಹುತೇಕ ಬೆಳೆಗಳಿಗೆ ರೋಗ, ಕೀಟಬಾಧೆ ಆವರಿಸುತ್ತಿದ್ದು, ರೈತರು ಕ್ರಿಮಿನಾಶಕ ಸಿಂಪಡಣೆಗೆ ಹೆಣಗಾಡುತ್ತಿದ್ದಾರೆ.

ಇದೇ ಮಳೆ 15 ದಿನಗಳ ಹಿಂದೆ ಬಂದಿದ್ದರೆ ಮುಂಗಾರಿನ ಹೆಸರು, ಶೇಂಗಾ, ಹತ್ತಿ ಇತರೆ ಬೆಳೆಗಳಿಗೆ ಅನಕೂಲವಾಗುತ್ತಿತ್ತು. ಕೆರೆ, ಕೃಷಿಹೊಂಡ, ಹಳ್ಳ ಮತ್ತು ಬದು-ಬಾಂದಾರಗಳಲ್ಲಿ ನೀರು ಸಂಗ್ರಹವಾಗುವ ದೊಡ್ಡ ಮಳೆಯಾಗಬೇಕು. ಅಂದಾಗ ಮಾತ್ರ ಅಂತರ್ಜಲ ಮಟ್ಟ ಹೆಚ್ಚಳ, ಉತ್ತಮ ಬೆಳೆಯ ನಿರೀಕ್ಷೆ ಮತ್ತು ವರ್ಷಪೂರ್ತಿ ನೀರಿಗಾಗಿ ಪರಿತಪಿಸದೇ ನೆಮ್ಮದಿಯ ನಿಟ್ಟುಸಿರುವ ಬಿಡಬಹುದು ಎಂಬುದು ರೈತ ಸಮುದಾಯದ ಅಭಿಪ್ರಾಯ.

ಶಾಲೆ ಪ್ರಾರಂಭ ಮತ್ತು ಬಿಡುವ ವೇಳೆ ಮಳೆಯ ನಡುವೆಯೂ ಮಕ್ಕಳು, ಶಿಕ್ಷಕರು, ನೌಕರರು ರೇನ್‌ಕೋಟ್, ಜರ್ಕಿನ್, ಛತ್ರಿ ಹಿಡಿದು ಮನೆ ಸೇರಿದರು. ಪಟ್ಟಣ ಸೇರಿ ತಾಲೂಕಿನ ಯಳವತ್ತಿ, ಯತ್ನಳ್ಳಿ, ಮಾಗಡಿ, ಗೊಜನೂರ, ಅಕ್ಕಿಗುಂದ, ಆದ್ರಳ್ಳಿ, ಬಡ್ನಿ, ಬಟ್ಟೂರ, ಸೂರಣಗಿ, ಹುಲ್ಲೂರ, ಬಾಲೆಹೊಸೂರ, ಶಿಗ್ಲಿ, ದೊಡ್ಡೂರ, ರಾಮಗೇರಿ, ಬಸಾಪುರ, ಅಡರಕಟ್ಟಿ ಸೇರಿ ಎಲ್ಲೆಡೆ ಉತ್ತಮ ಮಳೆಯಾಗಿದೆ.

## ಅಕ್ರಮ ಆಸ್ತಿ ಗಳಿಕೆ ಪ್ರಕರಣ : ಸಿಬಿಐ ಎಫ್‌ಐಆರ್ ಪ್ರಶ್ನಿಸಿ ಡಿಕೆಶಿ ಸಲ್ಲಿಸಿದ್ದ ಅರ್ಜಿ ವಜಾ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಅಕ್ರಮ ಆಸ್ತಿ ಗಳಿಕೆ ಆರೋಪದ ಮೇಲೆ ತಮ್ಮ ವಿರುದ್ಧ ಸಿಬಿಐ ಎಫ್‌ಐಆರ್ ದಾಖಲಿಸಿರುವುದನ್ನು ಪ್ರಶ್ನಿಸಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು (ಜುಲೈ 15) ವಜಾಗೊಳಿಸಿದೆ. ನ್ಯಾಯಮೂರ್ತಿಗಳಾದ ಬೇಲಾ ಎಂ ತ್ರಿವೇದಿ ಹಾಗೂ ಸತೀಶ್ ಚಂದ್ರ ಶರ್ಮಾ ಅವರಿದ್ದ ಪೀಠ ಡಿಕೆಶಿ ಅರ್ಜಿಯನ್ನು ವಜಾಗೊಳಿಸಿದೆ.

ವಾ.ಕ.ರ.ಸಾ. ಸಂಸ್ಥೆಯಿಂದ ಐತಿಹಾಸಿಕ, ಪ್ರೇಕ್ಷಣೀಯ ಸ್ಥಳಗಳಿಗೆ ವಿಶೇಷ ಸಾರಿಗೆ ವ್ಯವಸ್ಥೆ

# ವಿವಿಧ ಘಟಕಗಳಿಂದ ಪ್ಯಾಕೇಜ್ ಟೂರ್

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಮಳೆಗಾಲದ ದಿನಗಳಲ್ಲಿ ಪ್ರೇಕ್ಷಣೀಯ ಸ್ಥಳಗಳನ್ನು ವೀಕ್ಷಿಸಲು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ಹಿನ್ನೆಲೆಯಲ್ಲಿ ಪ್ರಸಿದ್ಧ ಸ್ಥಳಗಳಿಗೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗಗಳ ವಿವಿಧ ಘಟಕಗಳಿಂದ ಭಾನುವಾರ ಮತ್ತು ರಜಾ ದಿನಗಳಂದು ವಿಶೇಷ ಪ್ಯಾಕೇಜ್ ಟೂರ್ ಸಾರಿಗೆ ಕಾರ್ಯಾಚರಣೆ ಪ್ರಾರಂಭಿಸಲಾಗಿದೆ. ಸದರಿ ವಿಶೇಷ ಸಾರಿಗೆಗಳಲ್ಲಿ ಮಹಿಳಾ ಪ್ರಯಾಣಿಕರಿಗೆ ಶಕ್ತಿ ಯೋಜನೆಯಡಿ ಉಚಿತ ಪ್ರಯಾಣಕ್ಕೆ ಅವಕಾಶವಿರುವುದಿಲ್ಲ.

ಹುಬ್ಬಳ್ಳಿ ಗ್ರಾಮಾಂತರ ವಿಭಾಗದಿಂದ: ಹುಬ್ಬಳ್ಳಿ ಗೋಕುಲ ರಸ್ತೆಯ ಹೊಸ ಕೇಂದ್ರ ಬಸ್ ನಿಲ್ದಾಣದಿಂದ ಜೋಗಫಾಲ್ಸ್‌ಗೆ ಬೆಳಿಗ್ಗ 0.30ಕ್ಕೆ ರಾಜಹಂಸ, 8 ಗಂಟೆಗೆ ವೋಲ್ವೋ ಮಲ್ಟಿ ಆಕ್ಸೆಲ್ ಸಾರಿಗೆ ಕಾರ್ಯಾಚರಣೆಗೊಳ್ಳಲಿವೆ. ಜೋಗಫಾಲ್ಸ್ ವೀಕ್ಷಿಸಿ 9 ಗಂಟೆಗೆ ಹುಬ್ಬಳ್ಳಿಗೆ ಹಿಂತಿರುಗಲಿವೆ. ಮಾರ್ಗ ಮಧ್ಯದಲ್ಲಿ ಶಿರಸಿ ಶ್ರೀ ಮಾರಿಕಾಂಬ ದೇವಸ್ಥಾನ ದರ್ಶನಕ್ಕೆ ಅವಕಾಶ ಕಲ್ಪಿಸಲಾಗಿದೆ. ಈ ಕುರಿತು ಹೆಚ್ಚಿನ ಮಾಹಿತಿಗಾಗಿ ಮೊ:7760991682, 7760991674ಗೆ ಸಂಪರ್ಕಿಸಬಹುದಾಗಿದೆ.

ಧಾರವಾಡ ವಿಭಾಗದಿಂದ ವೇಗದೂತ ಸಾರಿಗೆ: ಧಾರವಾಡ ಹೊಸ ಕೇಂದ್ರ ಬಸ್ ನಿಲ್ದಾಣದಿಂದ ಬೆಳಿಗ್ಗೆ 7.30 ಗಂಟೆಗೆ ಹೊರಟು ದಾಂಡೇಲಿ-ಮೊಸಳೆ ಪಾರ್ಕ್, ಮೌಳಂಗಿ ಫಾಲ್ಸ್, ಕೊಳಗಿ ನೇಚರ್ ಪಾರ್ಕ್, ಉಳವಿ ಚನ್ನಬಸವೇಶ್ವರ ದೇವಸ್ಥಾನಗಳನ್ನು ವೀಕ್ಷಿಸಿ ಮರಳಿ 7 ಗಂಟೆಗೆ ಧಾರವಾಡಕ್ಕೆ ಹಿಂತಿರುಗಲಿದೆ.

ಧಾರವಾಡ ಹೊಸ ಕೇಂದ್ರ ಬಸ್ ನಿಲ್ದಾಣದಿಂದ ಗೋಕಾಕ ಫಾಲ್ಸ್‌ಗೆ ಬೆಳಿಗ್ಗೆ 7:30 ಗಂಟೆಗೆ ಹೊರಟು ನವಿಲುತೀರ್ಥ, ಸೊಗಲ ಕ್ಷೇತ್ರ, ಗೋಕಾಕ ಫಾಲ್ಸ್, ಹಿಡಕಲ್ ಡ್ಯಾಮ್ ವೀಕ್ಷಿಸಿ 7 ಗಂಟೆಗೆ ಧಾರವಾಡಕ್ಕೆ ಹಿಂತಿರುಗಲಿದೆ. ಹೆಚ್ಚಿನ ವಿವರಗಳಿಗಾಗಿ




ಮೊ:7760991688, 7760991679, 7760982552ಗೆ ಸಂಪರ್ಕಿಸಬಹುದಾಗಿದೆ.

ಚಿಕ್ಕೋಡಿ ವಿಭಾಗದಿಂದ ವೇಗದೂತ ಸಾರಿಗೆ: ಚಿಕ್ಕೋಡಿ ಬಸ್ ನಿಲ್ದಾಣದಿಂದ ಗೋಕಾಕ ಫಾಲ್ಸ್‌ಗೆ ಬೆಳಿಗ್ಗ 9 ಗಂಟೆಗೆ ಹೊರಟು ಹಿಡಕಲ್ ಡ್ಯಾಮ್, ಗೋಡಚಿನ ಮಲ್ಕಿ, ಗೋಕಾಕ ಫಾಲ್ಸ್ ವೀಕ್ಷಿಸಿ 6 ಗಂಟಗೆ ಚಿಕ್ಕೋಡಿಗೆ ಹಿಂತಿರುಗಲಿದೆ. ಹೆಚ್ಚಿನ ವಿವರಗಳಿಗಾಗಿ-7760991875 ಸಂಪರ್ಕಿಸಬಹುದಾಗಿದೆ. ನಿಪ್ಪಾಣಿಯಿಂದ ಗೋಕಾಕ ಫಾಲ್ಸ್‌ಗೆ ನಿಪ್ಪಾಣಿ ಬಸ್ ನಿಲ್ದಾಣದಿಂದ ಬೆಳಿಗ್ಗ 8:30 ಗಂಟೆಗೆ ಹೊರಟು ಹಿಡಕಲ್ ಡ್ಯಾಮ್, ಗೋಡಚಿನ ಮಲ್ಕಿ, ಗೋಕಾಕ ಫಾಲ್ಸ್ ವೀಕ್ಷಿಸಿ 6 ಗಂಟೆಗೆ ನಿಪ್ಪಾಣಿಗೆ ಹಿಂತಿರುಗಲಿದೆ. ಹೆಚ್ಚಿನ ವಿವರಗಳಿಗಾಗಿ-7760991879 ಸಂಪರ್ಕಿಸಬಹುದಾಗಿದೆ.

ಸಂಕೇಶ್ವರದಿಂದ ಗೋಕಾಕ ಫಾಲ್ಸ್ ಗೆ ಬೆಳಿಗ್ಗ 9:30 ಗಂಟೆಗೆ ಸಂಕೇಶ್ವರ ಬಸ್ ನಿಲ್ದಾಣದಿಂದ ಹೊರಟು ಹಿಡಕಲ್ ಡ್ಯಾಮ್, ಗೋಡಚಿನ ಮಲ್ಕಿ, ಗೋಕಾಕ ಫಾಲ್ಸ್ ವೀಕ್ಷಿಸಿ 6 ಗಂಟೆಗೆ ಸಂಕೇಶ್ವರಕ್ಕೆ ಹಿಂತಿರುಗಲಿದೆ. ಹೆಚ್ಚಿನ ವಿವರಗಳಿಗಾಗಿ-7760991877 ಸಂಪರ್ಕಿಸಬಹುದಾಗಿದೆ.

ಬೆಳಗಾವಿ ವಿಭಾಗದಿಂದ ವೇಗದೂತ ಸಾರಿಗೆ: ಬೆಳಗಾವಿಯಿಂದ ಗೋಕಾಕ ಫಾಲ್ಸ್‌ಗೆ ಬೆಳಿಗ್ಗೆ 9 ಗಂಟೆಗೆ ಬೆಳಗಾವಿ ಕೇಂದ್ರ ಬಸ್ ನಿಲ್ದಾಣದಿಂದ ಹೊರಟು ಹಿಡಕಲ್ ಡ್ಯಾಮ್, ಗೋಡಚಿನ ಮಲ್ಕಿ, ಗೋಕಾಕ ಫಾಲ್ಸ್ ವೀಕ್ಷಿಸಿ ಮರಳಿ 7 ಗಂಟೆಗೆ ಬೆಳಗಾವಿಗೆ ಹಿಂತಿರುಗಲಿದೆ. ಹೆಚ್ಚಿನ ವಿವರಗಳಿಗಾಗಿ-7760991625ಗೆ ಸಂಪರ್ಕಿಸಬಹುದಾಗಿದೆ.

ಹಾವೇರಿ ವಿಭಾಗದಿಂದ ವೇಗದೂತ ಸಾರಿಗೆ: ಹಾವೇರಿಯಿಂದ ಜೋಗ ಪಾಲ್ಸ್‌ಗೆ ಬೆಳಿಗ್ಗೆ 8 ಗಂಟೆಗೆ ಹಾವೇರಿ ಬಸ್ ನಿಲ್ದಾಣದಿಂದ ಹೊರಟು ಶಿರಸಿ, ಸಿದ್ದಾಪೂರ ಮಾರ್ಗವಾಗಿ ಶಿರಸಿ ಶ್ರೀ ಮಾರಿಕಾಂಬ ದೇವಸ್ಥಾನ ದರ್ಶನ ಪಡೆದು ಜೋಗ ಫಾಲ್ಸ್ ವೀಕ್ಷಿಸಿ ಮರಳಿ 7.30 ಗಂಟೆಗೆ ಹಾವೇರಿಗೆ ಹಿಂತಿರುಗಲಿದೆ. ಹೆಚ್ಚಿನ ವಿವರಗಳಿಗಾಗಿ-7760991925ಗೆ ಸಂಪರ್ಕಿಸಬಹುದಾಗಿದೆ.

ರಾಣೇಬೆನ್ನೂರನಿಂದ ಜೋಗ ಫಾಲ್ಸ್‌ಗೆ ಬೆಳಿಗ್ಗೆ 8 ಗಂಟೆಗೆ ರಾಣೇಬೆನ್ನೂರ ಬಸ್ ನಿಲ್ದಾಣದಿಂದ ಹೊರಟು ಹಿರೆಕೇರೂರ, ಶಿರಾಳಕೊಪ್ಪ, ಸೊರಬ, ಸಿದ್ದಾಪೂರ ಮಾರ್ಗವಾಗಿ ಜೋಗ ಫಾಲ್ಸ್ ವೀಕ್ಷಿಸಿ ಮರಳಿ 7.30 ಗಂಟೆಗೆ ರಾಣೇಬೆನ್ನೂರ ಹಿಂತಿರುಗಲಿದೆ. ಹೆಚ್ಚಿನ ವಿವರಗಳಿಗಾಗಿ-7760991927ಗೆ ಸಂಪರ್ಕಿಸಬಹುದಾಗಿದೆ.

ಸದರಿ ವಿಶೇಷ ಪ್ಯಾಕೇಜ್ ಸಾರಿಗೆಗಳ ಮುಂಗಡ ಟಿಕೆಟ್ ಬುಕಿಂಗ್‌ಗಾಗಿ www.ksrtc.in ವೆಬ್‌ಸೈಟ್ ಅಥವಾ ಬಸ್ ನಿಲ್ದಾಣದ ರಿಸರ್ವೇಶನ್ ಕೌಂಟರ್‌ಗಳ ಮೂಲಕ ಆಸನಗಳನ್ನು ಕಾಯ್ದಿರಿಸಬಹುದು. ಸಾರ್ವಜನಿಕ ಪ್ರಯಾಣಿಕರು ಈ ವಿಶೇಷ ಸಾರಿಗೆ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಪ್ರಿಯಾಂಗಾ ಎಂ. ಭಾ.ಆ.ಸೇ. ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗದಗ ಸಾಯಿ ಮಂದಿರದಲ್ಲಿ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-2

## ಅಂತರಂಗ-ಬಹಿರಂಗ ಶುದ್ಧವಾಗಿರಲಿ




■ ವಿಜಯಸಾಕ್ಷಿ ಸುದ್ದಿ, ಗದಗ

ಶಿರಡಿ ಸಾಯಿಬಾಬಾ ಅವರ ಬದುಕು, ಲೀಲೆ, ಪವಾಡಗಳು ಜನಸಮುದಾಯವನ್ನು ಸನ್ಮಾರ್ಗದೆಡೆಗೆ ಮುನ್ನಡೆಸುವ ಮೂಲಕ ಸಮಾಜದಲ್ಲಿ ಧಾರ್ಮಿಕ ಮನೋಭಾವವನ್ನು ಸ್ಫುರಿಸಿ ಆಮೂಲಾಗ್ರ ಚೈತನ್ಯ, ಸ್ಫೂರ್ತಿ, ಬದಲಾವಣೆ ತರಲು ಕಾರಣವಾಗಿವೆ ಎಂದು ಆಧ್ಯಾತ್ಮಿಕ ಚಿಂತಕ, ತಜ್ಞ ವೈದ್ಯ ಡಾ.ಸಂಗಮನಾಥ ಶೆಟ್ಟರ ಅಭಿಪ್ರಾಯಪಟ್ಟರು.

ಅವರು ಗದಗ ನಗರದ ಸಾಯಿಬಾಬಾ ಮಂದಿರದಲ್ಲಿ ಶ್ರೀ ಸಾಯಿಬಾಬಾ ಸತ್ಸಂಗ ಗದಗ-ಬೆಟಗೇರಿ, ಗುರುಪೂರ್ಣಿಮೆ ಅಂಗವಾಗಿ ಏರ್ಪಡಿಸಿರುವ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-2ರಲ್ಲಿ ಪ್ರವಚನ ನೀಡಿ ಮಾತನಾಡಿದರು.

ಮನುಷ್ಯ ಅಂತರಂಗ ಮತ್ತು ಬಹಿರಂಗವನ್ನು ಶುದ್ಧಿಯಾಗಿಟ್ಟುಕೊಳ್ಳಬೇಕು. ಅಂತರ್ಮುಖಿಯಾಗಿ ಆತ್ಮಾವಲೋಕನ ಮಾಡಿಕೊಳ್ಳುವ, ಚಂಚಲ ಮನಸ್ಸಿನ ಇಂದ್ರಿಯಗಳನ್ನು ಹತೋಟಿಯಲ್ಲಿಟ್ಟುಕೊಳ್ಳುವ ಗುಣವನ್ನು ಸಾಧಿಸಿಕೊಳ್ಳಬೇಕು ಎಂದರು.

ಗುರುವನ್ನು ಪರಮಾತ್ಮನ ಸ್ವರೂಪವೆಂದೇ ಭಾವಿಸಬೇಕು. ಜ್ಞಾನದ ಬಲದಿಂದ ಬುದ್ಧಿ ಚೈತನ್ಯಶೀಲತೆ ಮತ್ತು ಕ್ರಿಯಾಶೀಲತೆಯನ್ನು ಪಡೆದುಕೊಳ್ಳುತ್ತದೆ ಎಂಬುದು ಶ್ರೀಸಾಯಿ ಸಚ್ಚರಿತ್ರೆಯಿಂದ ತಿಳಿಯಬಹುದು. ಪ್ರತಿಯೊಬ್ಬರೂ ತಮ್ಮ ತಮ್ಮ ಪ್ರಾರಬ್ಧ ಕರ್ಮಗಳನ್ನು ಪೂರೈಸಲೇಬೇಕು. ದೇವರ, ಗುರುವಿನ ಅನುಗ್ರಹ ಹಾಗೂ ನಾಮಸ್ಮರಣೆಯಿಂದ ಧರ್ಮ-ಸೇವಾ ಕಾರ್ಯದಿಂದ ಕೊಂಚ ಕರ್ಮದ ತೀವ್ರತೆಯನ್ನು ತಗ್ಗಿಸಿಕೊಳ್ಳಬಹುದು. ಆದ್ದರಿಂದ ದೇವರಲ್ಲಿ, ಗುರುವಿನಲ್ಲಿ ಶ್ರದ್ಧೆ-ಭಕ್ತಿ ಹೊಂದುವದು ಅಗತ್ಯ ಎಂದರು.

ಪ್ರಸಾದ ಸೇವೆ ವಹಿಸಿದ್ದ ಸಿದ್ದಣ್ಣ ಪಟ್ಟಣಶೆಟ್ಟಿ, ರವಿಪ್ರಕಾಶ ರೆಡ್ಡಿ ದಂಪತಿಗಳನ್ನು ಮತ್ತು ಸಾಯಿಬಾಬಾ ಧುನಿಗೆ ತಲಾ 11 ಸಾವಿರ ರೂ.ಗಳನ್ನು ದೇಣಿಗೆ ನೀಡಿದ ಮಲ್ಲಮ್ಮ ಶಾಂತಗೌಡ ಗೌಡರ ಹಾಗೂ ವಿಜಯಲಕ್ಷ್ಮೀ ಎ.ಪಲ್ಲೇದ ದಂಪತಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ಸಾಯಿಬಾಬಾ ಸತ್ಸಂಗ ಸಮಿತಿಯ ಪದಾಧಿಕಾರಿಗಳು, ಸರ್ವ ಸದಸ್ಯರು ಹಾಗೂ ಭಕ್ತಾಧಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

### ಗದಗ ಸಾಯಿ ಮಂದಿರದಲ್ಲಿ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-3

## ಶ್ರೀ ಸಾಯಿಬಾಬಾ ಯುಗಾವತಾರಿ




■ ವಿಜಯಸಾಕ್ಷಿ ಸುದ್ದಿ, ಗದಗ

ಉತ್ಕೃಷ್ಟವಾದ ಶ್ರದ್ಧಾ-ಭಕ್ತಿಯುಳ್ಳ ಭಕ್ತನಲ್ಲಿ ಬಾಬಾ ನೆಲೆಸಿರುತ್ತಾನೆ. ಯುಗಾವತಾರಿಯಾದ ಬಾಬಾ ಪವಾಡ ಸದೃಶಗಳಿಂದ ಭಕ್ತರನ್ನು ಕಾಪಾಡುವನು ಎಂದು ಗದುಗಿನ ಆಧ್ಯಾತ್ಮಿಕ ಚಿಂತಕ, ತಜ್ಞ ವೈದ್ಯರಾದ ಡಾ. ಎಸ್.ಬಿ. ಶೆಟ್ಟರ ಅಭಿಪ್ರಾಯಪಟ್ಟರು.

ಅವರು ರವಿವಾರ ಗದುಗಿನ ಸಾಯಿಬಾಬಾ ಮಂದಿರದಲ್ಲಿ ಶ್ರೀ ಸಾಯಿಬಾಬಾ ಸತ್ಸಂಗ ಗದಗ-ಬೆಟಗೇರಿ, ಗುರುಪೂರ್ಣಿಮೆ ಅಂಗವಾಗಿ ಏರ್ಪಡಿಸಿರುವ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆ-3ರಲ್ಲಿ ಪ್ರವಚನ ನೀಡಿ ಮಾತನಾಡಿದರು.

ಭಕ್ತರ ಮನೋಭಾವನೆಯ ಇಂಗಿತವನ್ನು ಮೊದಲೇ ಗ್ರಹಿಸುವ, ನಂಬಿದ ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ, ಮೋಕ್ಷ ನೀಡುವ ಶ್ರೀ ಶಿರಡಿ ಸಾಯಿ ಬಾಬಾ ಮೌನವಾಗಿಯೂ, ಜಾಗೃತರಾಗಿಯೂ ಭಕ್ತರನ್ನು ಸಂತೈಸುತ್ತಿದ್ದರು. ಭಕ್ತಿಯಿಂದ ಬಂದ ಭಕ್ತರಲ್ಲಿ ಜಾತಿ, ಧರ್ಮವನ್ನು ಎಣಿಸುತ್ತಿರಲಿಲ್ಲ. ನಿಮ್ಮ ನಿಮ್ಮ ಧರ್ಮವನ್ನು, ತತ್ವ ಸಿದ್ಧಾಂತಗಳನ್ನು ಪಾಲಿಸಿ ಎಂದೆನ್ನುತ್ತಿದ್ದರು. ಸಂಕಷ್ಟದಲ್ಲಿರುವವರಿಗೆ ನೆರವಾಗಿ, ಭಕ್ತಿ, ಧರ್ಮ, ಮಾನವೀಯತೆಯ ದಾರಿಯಲ್ಲಿ ಮುನ್ನಡೆಯಿರಿ ಎಂದು ಬೋಧಿಸುತ್ತಿದ್ದರು ಎಂದು ವಿಶ್ಲೇಷಿಸಿದರು.

ಗುರುವನ್ನು ಪರಮಾತ್ಮನ ಸ್ವರೂಪವೆಂದೇ ಭಾವಿಸಬೇಕು. ಜ್ಞಾನದ ಬಲದಿಂದ ಬುದ್ಧಿ ಚೈತನ್ಯಶೀಲತೆಯನ್ನು ಮತ್ತು ಕ್ರಿಯಾಶೀಲತೆಯನ್ನು ಪಡೆದುಕೊಳ್ಳುತ್ತದೆ ಎಂಬುದನ್ನು ಶ್ರೀ ಸಾಯಿ ಸಚ್ಚರಿತ್ರೆಯಿಂದ ತಿಳಿದು ಬರುವದು ಎಂದು ವಿಶ್ಲೇಷಿಸಿ ಡಾ.ಶೆಟ್ಟರ ಅವರು ಪ್ರತಿಯೊಬ್ಬರು ತಮ್ಮ ತಮ್ಮ ಪ್ರಾರಬ್ಧ ಕರ್ಮಗಳನ್ನು ಪೂರೈಸಲೇಬೇಕು, ದೇವರ, ಗುರುವಿನ ಅನುಗ್ರಹ ಹಾಗೂ ನಾಮಸ್ಮರಣೆಯಿಂದ ಧರ್ಮ-ಸೇವಾ ಕಾರ್ಯದಿಂದ ಕೊಂಚ ಕರ್ಮದ ತೀವ್ರತೆಯನ್ನು ತಗ್ಗಿಸಿಕೊಳ್ಳಬಹುದು ಆದ್ದರಿಂದ ಭಕ್ತರು ದೇವರಲ್ಲಿ- ಗುರುವಿನಲ್ಲಿ ಶ್ರದ್ಧೆ ಭಕ್ತಿ ಹೊಂದುವದು ಅಗತ್ಯ ಎಂದರು.

ಗುರುಪೂರ್ಣಿಮೆಯ ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆಯ ಕಾರ್ಯಕ್ರಮದ ಪ್ರಸಾದ ಸೇವೆ ವಹಿಸಿಕೊಂಡಿದ್ದ ಐ.ಕೆ.ಬಲೂಚಗಿ, ಡಾ.ಎಸ್.ಡಿ.ಯರಗೇರಿ, ಸಿದ್ಧಣ್ಣ ಗೌರಿಪುರ ಪರಿವಾರದವರನ್ನು ಹಾಗೂ ಸಾಯಿಬಾಬಾ ಧುನಿಗೆ ದೇಣಿಗೆ 11 ಸಾವಿರ ರೂ.ಗಳನ್ನು ದೇಣಿಗೆ ನೀಡಿದ ವಿರುಪಾಕ್ಷ ಮಳ್ಳಿ, ರಂಗರಡ್ಡಿ ಇಟಗಿ ಪರಿವಾರದವನ್ನು ಸಮಾರಂಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಶ್ರೀ ಸಾಯಿಬಾಬಾ ಸತ್ಸಂಗ (ರಿ) ಸಮಿತಿಯ ಅಧ್ಯಕ್ಷ ಮಹೇಶ ತಲೇಗೌಡ್ರ ಸ್ವಾಗತಿಸಿದರು, ಕಾರ್ಯದರ್ಶಿ ನಿರೂಪಿಸಿ ಕೊನೆಗೆ ವಂದಿಸಿದರು. ಸಮಾರಂಭದಲ್ಲಿ ಸಾಯಿಬಾಬಾ ಭಕ್ತಾಧಿಗಳು, ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

### ಪರಸ್ಪರ ಒಪ್ಪಿಗೆ ಮೇರೆಗೆ ವಿಚ್ಛೇದನ ಕೋರಿ ಅರ್ಜಿ ಸಲ್ಲಿಸಿದ ಜೋಡಿಗಳು ಒಂದಾದ ಕಥೆ

# ರಾಜೀ ಮೂಲಕ ಒಂದಾದ ದಂಪತಿಗಳು



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ಜರುಗಿದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ವಿವಿಧ ಕಾರಣಗಳಿಂದ ವಿವಾಹ ವಿಚ್ಛೇದನ ಕೋರಿ ಅರ್ಜಿ ಸಲ್ಲಿಸಿದ್ದ 5 ಜೋಡಿಗಳನ್ನು ಪುನಃ ಒಂದುಗೂಡಿಸಿ ಕಳುಹಿಸಲಾಯಿತು. ಪರಸ್ಪರ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದ ದಂಪತಿಗಳಿಗೆ ತಿಳಿ ಹೇಳಿ, ಹಿಂದಿನದೆಲ್ಲಾ ಮರೆತು ಮುಂದೆ ಹೋಗಬೇಕು, ಹೊಂದಾಣಿಕೆಯಿಂದ ಜೀವನ ಸಾಗಿಸಬೇಕು, ಅರ್ಥ ಮಾಡಿಕೊಂಡು ಜೀವನ ಸಾಗಿಸಿದರೆ ಬದುಕು ಚೆನ್ನಾಗಿರುತ್ತದೆ ಎಂದು ಸಂಧಾನ ಜರುಗಿಸಿ ಅವರ ಮನ ಒಲಿಸಿ ಪುನಃ ಒಂದುಗೂಡಿಸಿದ ಕಥೆ ನಿಜಕ್ಕೂ ಮೆಚ್ಚುವಂಥಹದು ಎಂದು ಗದುಗಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಸವರಾಜ ನುಡಿದರು.

ಒಂದು ಜೋಡಿ ದಂಪತಿಗಳು ಪರಸ್ಪರ ವಿಚ್ಛೇದನಕ್ಕೆ 2023ರಲ್ಲಿ ಸೆಕ್ಷನ್ 13(ಬಿ) ಅಡಿಯಲ್ಲಿ ತಮಗೆ ವಿಚ್ಛೇದನ ನೀಡಬೇಕು ಎಂದು ಕೌಟುಂಬಿಕ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದರು. ಅವರಿಗೆ ಎರಡು ಮಕ್ಕಳು ಸಹ ಇದ್ದರು. ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿದ ನ್ಯಾಯಾಧೀಶರು ಹಾಗೂ ವಕೀಲರು ಈ ರೀತಿ ವಿಚ್ಛೇದನಕ್ಕೆ ಅರ್ಜಿ ಹಾಕಿ ವಿಚ್ಛೇದನ ಪಡೆದರೆ ಮಕ್ಕಳ ಭವಿಷ್ಯ ಏನಾಗುತ್ತದೆ ಎಂಬುದನ್ನು ವಿಚಾರ ಮಾಡಿ. ನಿಮಗಲ್ಲದಿದ್ದರೂ ನಿಮ್ಮ ಮಕ್ಕಳ ಉತ್ತಮ ಜೀವನಕ್ಕೆ ತಾವು ಕೂಡಿ ಬಾಳಿದರೆ ಚೆನ್ನಾಗಿರುತ್ತದೆ ಎಂದು ಬುದ್ಧಿವಾದ ಹೇಳಿ ಸಂಧಾನ ನಡೆಸಿ ಇಬ್ಬರ ಮನವೊಲಿಸಿ ಅವರನ್ನು ಕೂಡಿ ಹೋಗುವಂತೆ ಸಂಧಾನಗೊಳಿಸುವಲ್ಲಿ 1ನೇ ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರು, ಸಂಧಾನಕಾರ ವಕೀಲರು ಹಾಗೂ ಪ್ರಕರಣದ ವಕೀಲರಾದ ಎ.ಡಿ. ಬಡಿಗೇರ ಹಾಗೂ ಮೇರವಾಡೆ ವಕೀಲರು ಸಫಲರಾದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ರಾಜೇಶ್ವರ ಎಸ್ ಶೆಟ್ಟಿ, ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಕಾಶೀಮ ಚೂರಿಖಾನ, 1ನೇ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಖಾದರಸಾಬ ಹೆಚ್.ಬೆನಕಟ್ಟಿ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರಾದ ಜಿ.ಆರ್. ಶೆಟ್ಟರ ಹಾಗೂ ಕಿರಿಯ ವಿಭಾಗದ ನ್ಯಾಯಾಧೀಶರಾದ ಎಸ್.ಎಸ್. ತಳವಾರ, ದೀಪ್ತಿ ನಾಡಗೌಡ, ಬೀರಪ್ಪ ಕಾಂಬಳೆ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ. ಹಿರೇಮನಿ ಪಾಟೀಲ, ಕಾರ್ಯದರ್ಶಿ ಬಿ.ಎಚ್. ಮಾಡಲಗೇರಿ ಸೇರಿದಂತೆ ಪ್ರಕರಣದ ವಕೀಲರು, ಸಂಧಾನಕಾರ ವಕೀಲರು ಪಾಲ್ಗೊಂಡಿದ್ದರು. ಪ್ರಾರಂಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಸರ್ವರನ್ನು ಸ್ವಾಗತಿಸಿ ಕೊನೆಯಲ್ಲಿ ವಂದಿಸಿದರು.

ಅಂತೆಯೇ ಇನ್ನುಳಿದ ನಾಲ್ಕು ಜೋಡಿಗಳು ಸಹ ಜೀವನಾಂಶ ಕೋರಿ, ವಿಚ್ಛೇದನ ಕೋರಿ ವಿವಾಹ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದರು. ಆ ದಂಪತಿಗಳನ್ನು ಸಹ ಮನವೊಲಿಸಿ, 1ನೇ ಹೆಚ್ಚುವರಿ ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರು, ಪಕ್ಷಗಾರರ ಪರ ವಕೀಲರು, ಸಂಧಾನಕಾರ ವಕೀಲರು ಸೇರಿ ಬುದ್ಧಿವಾದ ಹೇಳಿ ವಿಚ್ಛೇದನಕ್ಕೆ ತಯಾರಾಗಿದ್ದ ದಂಪತಿಗಳನ್ನು ಪುನಃ ಒಂದುಗೂಡಿಸಿ ಕಳುಹಿಸಿದ್ದು ವಿಶೇಷವಾಗಿತ್ತು. ಅದೇರೀತಿ ಮುಂಡರಗಿ ನ್ಯಾಯಾಲಯದಲ್ಲಿ ಒಂದು ಜೋಡಿ ಹಾಗೂ ಲಕ್ಷ್ಮೇಶ್ವರ ನ್ಯಾಯಾಲಯದಲ್ಲಿ ಒಂದು ಜೋಡಿ ದಂಪತಿಗಳನ್ನು ಸಹ ಆಯಾ ನ್ಯಾಯಾಲಯದಲ್ಲಿ ರಾಜೀ ಸಂಧಾನದಲ್ಲಿ ಒಂದುಗೂಡಿ ಕಳುಹಿಸಲಾಯಿತು.

# ಸಂಪಾದಕರ ಸಮಾವೇಶದ ಪೂರ್ವಭಾವಿ ಸಭೆ




■ ವಿಜಯಸಾಕ್ಷಿ ಸುದ್ದಿ, ಗದಗ

ಇದೇ ಮೊದಲ ಬಾರಿಗೆ ಗದಗ ನಗರದಲ್ಲಿ ರಾಜ್ಯಮಟ್ಟದ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಮಾವೇಶವನ್ನು ಆಯೋಜಿಸಲು ತೀರ್ಮಾನಿಸಲಾಗಿದ್ದು, ಈ ಹಿನ್ನೆಲೆಯಲ್ಲಿ ನಗರದ ಪತ್ರಿಕಾ ಭವನದಲ್ಲಿ ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿತ್ತು. ಸಭೆಯ ಅಧ್ಯಕ್ಷತೆಯನ್ನು ರಾಜ್ಯಾಧ್ಯಕ್ಷರಾದ ತಿಪ್ಪೇಸ್ವಾಮಿ ಅವರು ವಹಿಸಿಕೊಂಡು ಸಮಾವೇಶದ ರೂಪರೇಷೆಗಳ ಬಗ್ಗೆ ಸಂಪಾದಕರ ಅಭಿಪ್ರಾಯ ಸಂಗ್ರಹಿಸಿದರು.

ಈ ವೇಳೆ ಮಾತನಾಡಿದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೆರಿ, ಪ್ರಥಮ ಸಮಾವೇಶ ಮಾಡುವ ಅವಕಾಶ ಗದಗ ಜಿಲ್ಲೆಗೆ ಒದಗಿಬಂದಿದ್ದು ಹೆಮ್ಮೆಯ ವಿಷಯವಾಗಿದೆ. ಸಮಾವೇಶವನ್ನು ಅತ್ಯಂತ ಅಚ್ಚುಕಟ್ಟಾಗಿ ಜವಾಬ್ದಾರಿಯಿಂದ ನಾವು ನಿರ್ವಹಿಸಲು ಸಿದ್ಧರಿದ್ದೇವೆ. ರಾಜ್ಯಾದ್ಯಂತ ಆಗಮಿಸುವ ಎಲ್ಲ ಸಂಪಾದಕರಿಗೆ ಯಾವುದೇ ಕೊರತೆ ಆಗದಂತೆ ಗದಗ ಜಿಲ್ಲೆಯ ಎಲ್ಲ ಸಂಪಾದಕರು ನೋಡಿಕೊಳ್ಳುತ್ತೇವೆ ಎಂದು ರಾಜ್ಯಾಧ್ಯಕ್ಷರಿಗೆ ಭರವಸೆ ನೀಡಿದರು.

ಸಮಾವೇಶವನ್ನು ಗದಗ ನಗರದ ಹುಬ್ಬಳ್ಳಿ ರಸ್ತೆಯಲ್ಲಿರುವ ಡಾ. ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ನಡೆಸಲು ಸರ್ವ ಸಂಪಾದಕರ ಒಪ್ಪಿಗೆಯ ಮೇರೆಗೆ ತೀರ್ಮಾನಿಸಲಾಯಿತು. ಇದೇ ವೇಳೆ ಸ್ಮರಣ ಸಂಚಿಕೆ ಸಮಿತಿ ಸೇರಿದಂತೆ ಹಲವು ಸಮಿತಿಗಳನ್ನು ರಾಜ್ಯಾಧ್ಯಕ್ಷರ ಸಮ್ಮುಖದಲ್ಲಿ ರಚನೆ ಮಾಡಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಕಾರ್ಯಕಾರಿಣಿ ಸಮಿತಿಯ ಸದಸ್ಯರು, ಗದಗ, ಕೊಪ್ಪಳ, ವಿಜಯಪುರ, ಬಾಗಲಕೋಟೆ, ಹುಬ್ಬಳ್ಳಿ, ತುಮಕೂರು, ಮಂಡ್ಯ, ಚಿತ್ರದುರ್ಗ, ದಾವಣಗೆರೆ, ಗುಲ್ಬರ್ಗ, ರಾಯಚೂರು ಜಿಲ್ಲಾಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ಸರ್ವ ಸದಸ್ಯರು ಪಾಲ್ಗೊಂಡಿದ್ದರು.

# ಉಪ ಚುನಾವಣೆಯಲ್ಲೂ ಕಾಂಗ್ರೆಸ್ ಗೆಲ್ಲಲಿದೆ



■ ವಿಜಯಸಾಕ್ಷಿ ಸುದ್ದಿ, ಗದಗ

ದೇಶದ 7 ರಾಜ್ಯಗಳಲ್ಲಿ ಇತ್ತೀಚೆಗೆ 13 ಸ್ಥಾನಗಳಿಗೆ ನಡೆದ ಉಪಚುನಾವಣೆಗಳಲ್ಲಿ ಇಂಡಿಯಾ ಮೈತ್ರಿಕೂಟವನ್ನು 10 ಸ್ಥಾನಗಳಲ್ಲಿ ಗೆಲ್ಲಿಸುವ ಮೂಲಕ ಕರ್ನಾಟಕ ರಾಜ್ಯದಲ್ಲಿ 3 ಸ್ಥಾನಗಳಿಗೆ ನಡೆಯಲಿರುವ ಉಪ ಚುನಾವಣೆಯಲ್ಲಿ ಇಂಡಿಯಾ ಮೈತ್ರಿಕೂಟದ ಪರವಾಗಿ ಜನರಿದ್ದಾರೆ ಎಂಬ ಸಂದೇಶವನ್ನು ರವಾನಿಸಿದ ಜನತೆ, 3 ಸ್ಥಾನಗಳ ಪೈಕಿ 3ರಲ್ಲೂ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿಗಳು ಗೆಲುವು ಸಾಧಿಸಲಿದೆ ಎಂದು ಕಾಂಗ್ರೆಸ್ ಯುವನಾಯಕ ಕರೀಮಸಾಬ ಸುಣಗಾರ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ದೇಶದಲ್ಲಿ ಎನ್.ಡಿ.ಎ ಮೈತ್ರಿಕೂಟ ಆಡಳಿತ ವೈಖರಿಯನ್ನು ಮೆಚ್ಚದ ಜನತೆ ಆ ಸರಕಾರದ ವಿರುದ್ಧ ಮತ ಚಲಾಯಿಸಿ ಇಂಡಿಯಾ ಮೈತ್ರಿಕೂಟದ ಪರವಾಗಿರುವ ಹಾಗೂ ಎನ್.ಡಿ.ಎ ಅಭ್ಯರ್ಥಿಗಳನ್ನು ತಿರಸ್ಕರಿಸುವ ಅಚಲ ನಿರ್ಧಾರ ಮಾಡಿದ್ದಾರೆ ಎಂಬುದು ಸ್ಪಷ್ಟವಾಗಿದೆ.

ಚುನಾವಣೆ ಪೂರ್ವದಲ್ಲಿಯೇ ಜನರ ಸಂಕಷ್ಟ ನೋವು-ನಲಿವು ಅರಿತು ಅದಕ್ಕೆ ಪರಿಹಾರವಾಗಿ ಪಂಚ ಗ್ಯಾರಂಟಿಗಳನ್ನು ಪೂರೈಸುವ ಭರವಸೆ ನೀಡಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದ ಗದ್ದುಗೆ ಏರಿದ ತಕ್ಷಣವೇ ಜನರಿಗೆ ಕೊಟ್ಟ ಭರವಸೆಯಂತೆ ಪಂಚ ಗ್ಯಾರಂಟಿಗಳನ್ನು ಈಡೇರಿಸಿದೆ. ಈ ವಿಶ್ವಾಸದ ಆಧಾರದ ಮೇಲೆ ಉಪಚುನಾವಣೆಯಲ್ಲಿ ಆ 3 ಕ್ಷೇತ್ರಗಳಲ್ಲೂ ಕಾಂಗ್ರೆಸ್ ಅಭ್ಯರ್ಥಿಗಳು ವಿಜಯದ ಮಾಲೆಯನ್ನು ಧರಿಸಲಿದ್ದಾರೆ ಎಂಬ ಅಚಲ ವಿಶ್ವಾಸವನ್ನು ಅವರು ವ್ಯಕ್ತಪಡಿಸಿದ್ದಾರೆ.

### ಪ.ಪೂ. ಶ್ರೀ ಡಾ. ಕಲ್ಲಯ್ಯಜ್ಜನವರಿಂದ 'ವಚನ ದರ್ಶನ' ಪುಸ್ತಕ ಲೋಕಾರ್ಪಣೆ

# ವಚನಗಳ ಸಾರ ಅರಿತು ನಡೆಯೋಣ



■ ವಿಜಯಸಾಕ್ಷಿ ಸುದ್ದಿ, ಗದಗ

ಶರಣರ ಮೂಲ ಆದರ್ಶಗಳನ್ನು ಮರೆಮಾಚದೆ, ವಚನಗಳ ಮೂಲ ಆಶಯದಂತೆ ಯಥಾವತ್ತಾಗಿ ಅರ್ಥೈಸಿಕೊಳ್ಳಬೇಕಾಗಿದೆ. ಅಜ್ಞಾನವನ್ನು ಕಳೆದು ಜ್ಞಾನವನ್ನು ಉಣಬಡಿಸುವ ಸಾಹಿತ್ಯವೇ ವಚನ ದರ್ಶನ. ಅಹಂಕಾರವನ್ನು ಅಳಿಸಿ, ಮಾನವೀಯ ಮೌಲ್ಯಗಳನ್ನು ಬೆಳೆಸುವುದೇ ವಚನ. ವಚನಗಳ ಸಾರವನ್ನು ಅರಿತು ನಡೆಯಬೇಕಾಗಿದೆ. ವಚನ ಸಾಹಿತ್ಯವನ್ನು ಎಲ್ಲರಿಗೂ ಉಣಬಡಿಸುವುದರಿಂದ ಸಮ ಸಮಾಜವನ್ನು ಕಟ್ಟಲು ಸಾಧ್ಯ ಎಂದು ಹುಬ್ಬಳ್ಳಿಯ ವಾಣಿಜ್ಯ ತೆರಿಗೆಗಳ ಇಲಾಖೆಯ ನಿವೃತ್ತ ಉಪ ಆಯುಕ್ತ ಗೋವಿಂದಪ್ಪ ಗೌಡಪ್ಪಗೋಳ ಅಭಿಪ್ರಾಯಪಟ್ಟರು.

ಇಲ್ಲಿನ ಬಯಲು ವೇದಿಕೆ, ಕೆ.ಎಲ್.ಇ. ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯ ಹಾಗೂ ಕನಕದಾಸ ಶಿಕ್ಷಣ ಸಮಿತಿ ಇವುಗಳ ಸಹಯೋಗದಲ್ಲಿ 'ವಚನ ದರ್ಶನ' ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

12ನೇ ಶತಮಾನದಲ್ಲಿ ಜಗಜ್ಯೋತಿ ಬಸವಣ್ಣನವರು ಸಮಸಮಾಜದ ತಳಹದಿಯಲ್ಲಿ ಕಲ್ಯಾಣ ರಾಜ್ಯವನ್ನು ಕಟ್ಟಿದರು. ಭಕ್ತಿ ಪಂಥದ ಮುಖಾಂತರ ಜಾತಿ ತಾರತಮ್ಯವನ್ನು ಹೋಗಲಾಡಿಸಲು ಹಗಲಿರುಳು ಶ್ರಮಿಸಿ ಸಮಾಜದ ಅಂಕು-ಡೊಂಕುಗಳನ್ನು ತಿದ್ದಿ ಆಧ್ಯಾತ್ಮಿಕ ಕ್ರಾಂತಿಯನ್ನು ಮಾಡಿದರು. ವಚನಗಳ ಮೂಲಕ ಜ್ಞಾನವನ್ನು ಮತ್ತು ಭಕ್ತಿಯನ್ನು ಉಣಬಡಿಸಿದ ಮಹಾತ್ಮ ಬಸವಣ್ಣನವರು 'ಕಾಯಕವೇ ಕೈಲಾಸ' ಎಂದು ಹೇಳುವುದರ ಮೂಲಕ ಕಾಯಕ ಲೋಕವನ್ನೇ ಸೃಷ್ಟಿಸಿ ಕಾಯಕದ ಜೊತೆಗೆ ಭಕ್ತಿ ಮಾರ್ಗವನ್ನು ಸಮಾಜಕ್ಕೆ ತೋರಿದರು ಎಂದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾದ ಪ.ಪೂ. ಶ್ರೀ ಡಾ. ಕಲ್ಲಯ್ಯಜ್ಜನವರು ಮಾತನಾಡುತ್ತಾ, ಸಮಾಜದಲ್ಲಿನ ತಾರತಮ್ಯವನ್ನು ಹೋಗಲಾಡಿಸುವಲ್ಲಿ ವಚನಗಳ ಪಾತ್ರ ಬಹಳ ಮಹತ್ವದಾಗಿದೆ. ಬಸವಣ್ಣನವರು 'ದಯವೇ ಧರ್ಮದ ಮೂಲ' ಎಂದರು. ಅಂದರೆ ಪ್ರತಿಯೊಬ್ಬರಲ್ಲಿ ದಯೆಯನ್ನು ತೋರಬೇಕು, ಅದರೊಂದಿಗೆ ಪ್ರತಿಯೊಬ್ಬರಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕಾಗಿದೆ. ವಚನಗಳು ಪ್ರತಿಯೊಬ್ಬರಿಗೂ ತಲುಪಲು ಸಾಹಿತಿಗಳು, ವಿದ್ವಾಂಸರು ಶ್ರಮಿಸಬೇಕಾಗಿದೆ ಎಂದರು.

ಜೆ.ಟಿ. ಕಾಲೇಜಿನ ನಿವೃತ್ತ ಕನ್ನಡ ಪ್ರಾಧ್ಯಾಪಕರಾದ ಪ್ರೊ.ಶಕುಂತಲಾ ಸಿಂಧೂರ ಹಾಗೂ ವಿ.ಡಿ.ಎಸ್.ಟಿ. ಪ.ಪೂ. ಕಾಲೇಜಿನ ಪ್ರಾಚಾರ್ಯ ಮಾರುತಿ ಸಿ.ಕಟ್ಟಿಮನಿ 'ವಚನ ದರ್ಶನ' ಪುಸ್ತಕದ ಕುರಿತು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಕನಕದಾಸ ಶಿಕ್ಷಣ ಸಮಿತಿಯ ಜಂಟಿ ಕಾರ್ಯದರ್ಶಿಗಳಾದ ಡಾ.ಪುನಿತ ಕುಮಾರ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಕನಕದಾಸ ಶಿಕ್ಷಣ ಸಮಿತಿ, ಕಾರ್ಯದರ್ಶಿಗಳಾದ ರವೀಂದ್ರನಾಥ ಬಿ.ದಂಡಿನ, ಉಮೇಶ ಹಿರೇಮಠ, ಡಾ. ಜಿ.ಸಿ. ಜಂಪಣ್ಣವರ ವೇದಿಕೆ ಮೇಲೆ ಉಪಸ್ಥಿತರಿದ್ದರು. ಬಯಲು ಸಂಯೋಜಕ ನಿಂಗಪ್ಪ ಪೂಜಾರ ಅತಿಥಿಗಳನ್ನು ಪರಿಚಯಿಸಿ ಸ್ವಾಗತಿಸಿದರು. ಕೆಎಲ್‌ಇ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ಉಪ ಪ್ರಾಂಶುಪಾಲರಾದ ಡಾ. ವೀಣಾ ನಿರೂಪಿಸಿದರು. ಬಯಲು ಸಹ ಸಂಯೋಜಕರಾದ ಹರ್ಷಾ ನಿಲೂಗಲ್ ವಂದಿಸಿದರು.

ಈ ಸಂದರ್ಭದಲ್ಲಿ ಹಿರಿಯರಾದ ಸುಧೀರ ಘೋರ್ಪಡೆ, ಸಾಮಾಜಿಕ ಹೋರಾಟಗಾರ ರವಿಕಾಂತ ಅಂಗಡಿ, ಕ.ಸಾ.ಪ ತಾಲೂಕಾಧ್ಯಕ್ಷರಾದ ಡಾ.ರಶ್ಮಿ ಅಂಗಡಿ ಹಾಗೂ ಸಾಹಿತಿಗಳು, ಅನೇಕ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಕಾಲೇಜಿನ ಸಿಬ್ಬಂದಿ ವರ್ಗ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಬಸವಣ್ಣ ಮತ್ತು ಶರಣರ ಮೂಲ ಆದರ್ಶಗಳನ್ನು ಮರೆಮಾಚದೆ ಮೂಲ ವಚನಗಳ ಆಧಾರದ ಮೇಲೆ ಶರಣರು ಮತ್ತು ಬಸವಣ್ಣನ ನೈಜ ಅದರ್ಶಗಳ ಅಧ್ಯಯನಕ್ಕೆ ಹೆಚ್ಚು ಒತ್ತುಕೊಡಬೇಕಾಗಿದೆ. ಇಂದಿನ ಪೀಳಿಗೆಗೆ ವಚನ ಸಾಹಿತ್ಯ ಸಾರವನ್ನು ತಿಳಿಸಬೇಕಾಗಿದೆ. ಸಂಸ್ಕಾರ, ಸಂಸ್ಕೃತಿಯ ಉಳಿವಿಗಾಗಿ ಶರಣರ ವಚನಗಳನ್ನು ಉಣಬಡಿಸುವುದರ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಮುಂದಾಗಬೇಕು.

**– ಗೋವಿಂದಪ್ಪ ಗೌಡಪ್ಪಗೋಳ.**
ವಾಣಿಜ್ಯ ತೆರಿಗೆ ಇಲಾಖೆಯ ನಿವೃತ್ತ ಉಪ ಆಯುಕ್ತರು.

ಕರ್ನಾಟಕ ಸರ್ಕಾರ

**ಪಟ್ಟಣ ಪಂಚಾಯತ ಕಾರ್ಯಾಲಯ ಮುಳಗುಂದ-582117**

(ಜಿಲ್ಲೆ: ಗದಗ ರಾಜ್ಯ: ಕರ್ನಾಟಕ)

**Town Panchayath Council Mulgund-582117**

**Dist: Gadag State: Karnataka**

**ಪೌರಾಡಳಿತ ಇಲಾಖೆ**

ಸಂ:ಪಪಂಮು/ತಾಂ.ವಿ./ಎಸ್.ಎಫ್.ಸಿ.(ಪ.ಪಂ.ನಿ&.15 ಹಣಕಾಸು/ಟೆಂಡರ/ವಹಿ- /2024-25 ದಿನಾಂಕ:-15-07-2024

**ಅಲ್ಪಾವಧಿ ಟೆಂಡರ ಪ್ರಕಟಣೆ ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೇಂಟ್ ಮೂಲಕ**

ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ಇವರಿಂದ ಮುಳಗುಂದ ಪಟ್ಟಣ ಪಂಚಾಯತ ವ್ಯಾಪ್ತಿಯಲ್ಲಿ ಕರ್ನಾಟಕ ಪಾರದರ್ಶಕತೆ ಅಧಿನಿಯಮ-2000ರ ಪ್ರಕಾರ "ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್" ಪದ್ದತಿಯಲ್ಲಿ ಸನ್.2024-25ನೇ ಸಾಲಿನ ಎಸ್.ಎಫ್.ಸಿ./ಶೇ.24.10%,/ಶೇ.7.25%/ಪಂ.ಪಂ.ನಿಧಿ ಮತ್ತು 15ನೇ ಹಣಕಾಸು ಅನುದಾನದಡಿ ಇಂಡೆಂಟ ನಂಬರಗಳ ಸಂಖ್ಯೆಗಳು-21578, 21586 (SC), 21588, 21640 (ST), 21646 (SC), 21650, 21669, ಮತ್ತು 21676 ನೇದ್ದರ ಕಾಮಗಾರಿಗಳ ನಿರ್ವಹಣೆಗಾಗಿ ಕೆ.ಡಬ್ಲ್ಯೂ.1/2/3 ದಸ್ತಾವೇಜನಲ್ಲಿ ಕರ್ನಾಟಕ ಪಬ್ಲಿಕ್ ಪ್ರೋಕ್ಯೂರಮೆಂಟ್ ಪೋರ್ಟಲ್‌ನಲ್ಲಿ ನೊಂದಾಯಿಸಲ್ಪಟ್ಟ ಮತ್ತು ಲೋಕೋಪಯೋಗಿ ಇಲಾಖೆಯಲ್ಲಿ ನೊಂದಾಯಿತ ಚಾಲ್ತಿ ಸಾಲಿನ ಅರ್ಹ ಗುತ್ತಿಗೆದಾರರಿಂದ ಟೆಂಡರನ್ನು ಆಹ್ವಾನಿಸಲಾಗಿದೆ. ಇ-ಪ್ರೋಕ್ಯೂರಮೆಂಟ ದಾಖಲೆಗಳಿಗಾಗಿ http://kppp.karnataka.gov.in ರ ಮೂಲಕ ಕೆಳಗೆ ನಮೂದಿಸಿರುವ ದಿನಾಂಕದಂದು ಆನ್‌ಲೈನ್ ಮೂಲಕವೇ ಟೆಂಡರ್ ಸಲ್ಲಿಸುವದು.

(1) ಇ-ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಟೆಂಡರ ಸಲ್ಲಿಸುವ ಕೊನೆಯ **ದಿನಾಂಕ: 29-07-2024 ಸಂಜೆ:4.00 ಗಂಟೆಗೆ** (2) ಇ-ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ತಾಂತ್ರಿಕ ಬಿಡ್ ತೆರೆಯುವ **ದಿನಾಂಕ: 30-07-2024 ಸಂಜೆ:4.30 ಗಂಟೆಗೆ** (3) ಇ-ಪ್ರೋಕ್ಯೂರಮೆಂಟ್ ಪದ್ಧತಿಯಲ್ಲಿ ಆರ್ಥಿಕ ಬಿಡ್ ತೆರೆಯುವ **ದಿನಾಂಕ: 31-07-2024 ಸಂಜೆ:4:30 ಗಂಟೆಗೆ**

ನಿಗಧಿ ಪಡಿಸಿದ ದಿನಾಂಕಗಳು ಒಂದು ವೇಳೆ ರಜಾ ದಿನಗಳನ್ನಾಗಿ ಘೋಷಿಸಲ್ಪಟ್ಟರೆ ಮುಂದಿನ ದಿನಾಂಕವನ್ನು ಪರಿಗಣಿಸಲಾಗುವದು. ಯಾವುದೇ ತಿದ್ದುಪಡಿಗಳನ್ನು ಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ.

ಈ ಕಛೇರಿಯಲ್ಲಿ ಯಾವುದೇ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲಾ ಕಾಮಗಾರಿ ಇ.ಎಂ.ಡಿ. ಪೂರ್ಣಗೊಳಿಸುವ ಅವಧಿ, ಗುತ್ತಿಗೆದಾರರ ದರ್ಜೆ ಹಾಗೂ ಇನ್ನಿತರ ಹೆಚ್ಚಿನ ಮಾಹಿತಿ ಹಾಗೂ ಷರತ್ತುಗಳಿಗೆ ಕಛೇರಿಯ ವೆಬ್‌ಸೈಟ್ http://www.mulagundatown.mrc.gov.in ಹಾಗೂ ಕಛೇರಿ ವೇಳೆಯಲ್ಲಿ ಸಂಭಂಧಿಸಿದ ಶಾಖೆಯಲ್ಲಿ ಮಾಹಿತಿಯನ್ನು ಪಡೆಯಬಹುದು. ಇ-ಪೋರ್ಟಲ್‌ನ ಎಲ್ಲ ಷರತ್ತುಗಳು ಅನ್ವಯಿಸುತ್ತವೆ. ಹಾಗೂ ಟೆಂಡರ ಮಂಜೂರ ವ ನಾಮಂಜೂರ ಮಾಡುವ ಅಧಿಕಾರವನ್ನು ಪಟ್ಟಣ ಪಂಚಾಯತ ಕಾಯ್ದಿರಿಸಿಕೊಂಡಿದೆ.

**ಸಹಿ/- (ಶ್ರೀ.ಮಂಜುನಾಥ ಪಿ ಗುಳೇದ)** ಮುಖ್ಯಾಧಿಕಾರಿ ಪಟ್ಟಣ ಪಂಚಾಯತ ಮುಳಗುಂದ

**ಸಹಿ/- (ಶ್ರೀನಿವಾಸಮೂರ್ತಿ ಕುಲಕರ್ಣಿ)** ಆಡಳಿತಾಧಿಕಾರಿಗಳು ಪಟ್ಟಣ ಪಂಚಾಯತ ಮುಳಗುಂದ ತಹಶೀಲ್ದಾರ ಹಾಗೂ ತಾಲೂಕಾ ದಂಡಾಧಿಕಾರಿಗಳು ಗದಗ

ವಾ.ಸಾ.ಇ/ಗದಗ/90/ದೇಶಪಾಂಡೆಪಬ್ಲಿಸಿಟಿ/2024-25

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka